ಸಂಪುಟ : 10 ಸಂಚಿಕೆ: 109 ಪುಟ : 4+2 ಬೆಲೆ: 3.00 ಶನಿವಾರ ಮೇ 31 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 109 Pages : 4+2 Price : 3.00 Saturday May 31 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




### ಡಿಸಿ, ಸಿಇಓಗಳೊಂದಿಗೆ ಸಭೆ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ । ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ

# ಅಹಂ ಬಿಟ್ಟು ಸಮನ್ವಯದಿಂದ ಕೆಲಸ ಮಾಡಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಂವಿಧಾನದ ಆಶಯ ಮತ್ತು ಧ್ಯೇಯೋದ್ದೇಶಗಳಿಗೆ ಯಾರೂ ವಿರುದ್ಧವಾಗಿ ಕಾರ್ಯನಿರ್ವಹಿಸಬಾರದು. ಅಂತಹ ಶಕ್ತಿಗಳು ಬೆಳೆಯಲು ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಇತ್ತೀಚಿನ ದಿನಗಳಲ್ಲಿ ಇಂತಹ ಶಕ್ತಿಗಳು ತಲೆ ಎತ್ತುತ್ತಿದ್ದು, ಅಂತಹ ಶಕ್ತಿಗಳನ್ನು ಮೊಳಕೆಯಲ್ಲೇ ಚಿವುಟಿ ಹಾಕಬೇಕು. ಅಂತಹ ವ್ಯಕ್ತಿಗಳೂ ಯಾರೇ ಆಗಿದ್ದರೂ, ಅವರನ್ನು ಮಟ್ಟ ಹಾಕುವುದು, ಅಂತಹ ಶಕ್ತಿಗಳು ಬೆಳೆಯದಂತೆ ನೋಡಿಕೊಳ್ಳಬೇಕಾದುದು ಡಿಸಿ, ಸಿಇಒ, ಎಸ್‌ಪಿಗಳ ಜವಾಬ್ದಾರಿಯಲ್ಲವೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.



ಬೆಂಗಳೂರಿನಲ್ಲಿ ಶುಕ್ರವಾರ ಜಿಲ್ಲಾಧಿಕಾರಿಗಳು, ಸಿಇಒ ಸೇರಿದಂತೆ ಉನ್ನತ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಮುಖ್ಯಮಂತ್ರಿಗಳು, ಹಿಂದಿನ ಸಭೆಯಲ್ಲಿ ನೀಡಿದ ಸೂಚನೆಗಳು, ತೆಗೆದುಕೊಂಡ ನಿರ್ಣಯಗಳಲ್ಲಿ ಕೆಲವು ಇಲಾಖೆಗಳು ಶೇ. 100ರಷ್ಟು ಪ್ರಗತಿ ತೋರಿಸಿಲ್ಲ. ಇದನ್ನು ಸಹಿಸಲು ಸಾಧ್ಯವಿಲ್ಲ. ಈ ವಿಚಾರದಲ್ಲಿ ರಾಜಿ ಇಲ್ಲ. ಜನರ ಸಮಸ್ಯೆಗಳಿಗೆ ಸ್ಪಂದಿಸದ ಅಧಿಕಾರಿಗಳ ಮೇಲೆ ನಿಷ್ಠುರವಾಗಿ ಕ್ರಮ ಕೈಗೊಳ್ಳುವುದು ನಮಗೆ ಅನಿವಾರ್ಯ ಎಂದರು.

ಜಿಲ್ಲಾಧಿಕಾರಿ, ಜಿಲ್ಲಾ ರಕ್ಷಣಾಧಿಕಾರಿಗಳು ಮತ್ತು ಸಿಇಒಗಳು ತಮ್ಮ ಅಹಂ ಬದಿಗೊತ್ತಿ ಸಮನ್ವಯದಿಂದ ಕೆಲಸ ಮಾಡಿದರೆ ಮಾತ್ರ ರಾಜ್ಯದ ಸಮಗ್ರ ಅಭಿವೃದ್ಧಿ ಸಾಧ್ಯ. ಈ ಉದ್ದೇಶಕ್ಕಾಗಿಯೇ ನೀವು ಐಎಎಸ್ ಮಾಡಿರುವುದು. ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು. ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿ ಕೆಲಸ ಮಾಡುವವರ ವಿರುದ್ಧ ಮತ್ತು ಜನಪರ ಆಶಯಗಳಿಗೆ ಸ್ಪಂದಿಸದಿದ್ದರೆ ಅವರ ವಿರುದ್ಧ ನಾವು ಕ್ರಮ ಕೈಗೊಳ್ಳಬೇಕಾಗುತ್ತದೆ. ನೀವೆಲ್ಲಾ ಸಂವಿಧಾನ ಓದಿದ್ದೀರಿ, ಅದರ ಆಶಯಗಳಿಗೆ, ಧ್ಯೇಯೋದ್ದೇಶಗಳಿಗೆ ಬದ್ಧರಾಗಿದ್ದೀರಿ ಎಂದು ನಂಬಿದ್ದೇನೆ. ಇದನ್ನು ಕಾರ್ಯ ರೂಪಕ್ಕೆ ತರುವುದರಲ್ಲಿ ವಿಫಲರಾದವರ ವಿರುದ್ಧ ನಾನು ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲು ನಿರ್ಧರಿಸಿದ್ದೇನೆ ಎಂದು ಎಚ್ಚರಿಸಿದರು. ನಾವು ಜನರ ತೆರಿಗೆ ದುಡ್ಡಿನಲ್ಲಿ ಆಡಳಿತ ನಡೆಸುತ್ತಿದ್ದೇವೆ. ನಾವು-ನೀವು ಎಲ್ಲಾ ಸವಲತ್ತುಗಳನ್ನು ಅನುಭವಿಸುತ್ತಿರುವುದು ಜನರ ತೆರಿಗೆ ಹಣದಿಂದ ಎನ್ನುವುದನ್ನು ಮರೆಯಬಾರದು. ಕಾರು, ಮನೆ ಸೇರಿ ಎಲ್ಲಾ ಸವಲತ್ತುಗಳನ್ನು ನಾವು ಕೊಟ್ಟಿರುವುದು ತೆರಿಗೆ ಹಣದಲ್ಲಿ. ಆದ್ದರಿಂದ ಜನಪರ ಧೋರಣೆಯಲ್ಲಿ ಕೆಲಸ ಮಾಡಬೇಕು. ಇದೇ ಪ್ರಜಾಪ್ರಭುತ್ವದ ಮೂಲ ಆಶಯ ಎಂದರು.

ಈ ವರ್ಷ 700 ಬಾಲ್ಯ ವಿವಾಹ ನಡೆದಿದೆ. ಬಾಲ್ಯದಲ್ಲೇ ತಾಯಂದಿರಾದ ಘಟನೆಗಳೂ ವರದಿಗಳಾಗಿವೆ. ಈ ಬಗ್ಗೆ ಹಲವು ಕಡೆ ಎಫ್‌ಐಆರ್ ಕೂಡ ದಾಖಲಾಗಿಲ್ಲ ಎನ್ನುವುದು ಗಮನಕ್ಕೆ ಬಂದಿದೆ. ಸ್ವಾತಂತ್ರ್ಯ ಬಂದು ಇಷ್ಟು ವರ್ಷಗಳಾದರೂ 700 ಬಾಲ್ಯ ವಿವಾಹ ನಡೆಯುತ್ತಿದೆ ಎಂದರೆ ಹೇಗೆ? ಬಾಲ್ಯವಿವಾಹ ತಡೆಗೆ ಕಾಯ್ದೆ, ಕಾನೂನುಗಳಿವೆ. ಆದರೂ ಇದನ್ನು ಪರಿಣಾಮಕಾರಿಯಾಗಿ ಕೆಲವು ಕಡೆ ಬಳಸಿಲ್ಲ. ಇದು ತಪ್ಪಲ್ಲವೇ ಎಂದು ಸಿ.ಎಂ ಖಾರವಾಗಿ ಪ್ರಶ್ನಿಸಿದರು.

#### ಇಂದಿರಾ ಕ್ಯಾಂಟೀನ್ ಪೂರ್ಣಗೊಳಿಸಿ

ನಮ್ಮ ಸರ್ಕಾರ ಹೊಸದಾಗಿ ಘೋಷಣೆ ಮಾಡಿರುವ ಎಲ್ಲಾ ಇಂದಿರಾ ಕ್ಯಾಂಟೀನ್‌ಗಳು ಕಾರ್ಯಾರಂಭ ಮಾಡಲು ಜಿಲ್ಲಾಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಇಂದಿರಾ ಕ್ಯಾಂಟೀನ್‌ಗಳಿಗೆ ಇನ್ನೂ 5 ಕಡೆ ಸ್ಥಳ ಗುರುತಿಸಬೇಕಾಗಿದೆ. ತಕ್ಷಣ ನಿವೇಶನ ಗುರುತಿಸಬೇಕು. ಆಹಾರ ವಿತರಣೆ 43 ಇಂದಿರಾ ಕ್ಯಾಂಟೀನ್‌ಗಳಲ್ಲಿ ಮಾತ್ರ ಪ್ರಾರಂಭವಾಗಿದೆ. ಎಲ್ಲಾ ಕಡೆ ಆಹಾರ ವಿತರಣೆ ಪ್ರಾರಂಭಿಸಲು ಜಿಲ್ಲಾಧಿಕಾರಿಗಳು ಕ್ರಮಕೈಗೊಳ್ಳಬೇಕು ಎಂದು ಸಿಎಂ ಸೂಚಿಸಿದರು.



#### ಪರಿಹಾರ ವಿಳಂಬಕ್ಕೆ ಸಿಎಂ ಗರಂ

ಜಿಲ್ಲಾವಾರು ರೈತರ ಆತ್ಮಹತ್ಯೆ ಅಂಕಿ ಅಂಶಗಳನ್ನು ಗಮನಿಸಿದ ಮುಖ್ಯಮಂತ್ರಿಗಳು, ಇನ್ನೂ 13 ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಪರಿಹಾರ ಬಾಕಿ ಇರುವುದನ್ನು ನೋಡಿ ಅಸಮಾಧಾನಗೊಂಡ ಮುಖ್ಯಮಂತ್ರಿಗಳು ಜಿಲ್ಲಾಧಿಕಾರಿಗಳಿಂದ ವರದಿ ಪಡೆದರು. ಹಾವೇರಿ ಸೇರಿ ಇನ್ನೆರಡು ಜಿಲ್ಲೆಗಳಲ್ಲಿ ಒಟ್ಟು 13 ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಪರಿಹಾರ ಬಾಕಿ ಇದ್ದು, ಆದಷ್ಟು ಬೇಗ ಬಗೆಹರಿಸಿ ಪರಿಹಾರ ಒದಗಿಸಿ ಎಂದು ಸೂಚಿಸಿದರು.

---

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮೇ.31 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 28- ಪಂಚಾಕ್ಷರಿ ನಗರ 5ನೇ ಕ್ರಾಸ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 – ಎಸ್ ಬಿ. ನಗರ, ಎಡೆಯೂರು ಸಿದ್ದಲಿಂಗೇಶ್ವರ ನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 20, 21, 23, 31 – ದ್ಯಾಮಪ್ಪನ ಕಟ್ಟಿ, ಪಡಗದ 2 ಭಾಗಗಳು, ಜಂತ್ಲಿ ಹೊಸ ಲೈನ್ ಹಳೇ ಲೈನ್, ಬೇವಿನ ಮರದಮ್ಮ, ಎಸ್ ಟಿ ಡಿ, ಖಾನತೋಟ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 1 – ಎಸ್ ಎಂ. ಕೃಷ್ಣ ನಗರದ ಪೂರ್ತಿ ಭಾಗಗಳು. ವಾರ್ಡ್ ನಂ. 11, 12 – ಕರಿಯಮ್ಮ ಕಲ್ಲು, ಮಸೂತಿ, ಚರ್ಚ್, ಗಣಪತಿ ಕಟ್ಟಿ, ಹನುಮಂತ ದೇವರ ಗುಡಿ, ಕಾಶಿ ವಿಶ್ವನಾಥ್ ಗುಡಿ ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

### ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಕರೆ

# ಶಿಕ್ಷಕರು ಜವಾಬ್ದಾರಿಯಿಂದ ಕೆಲಸ ಮಾಡಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಹಂತದಲ್ಲಿ ಶೈಕ್ಷಣಿಕ ಸುಧಾರಣೆಗಾಗಿ ಜಿಲ್ಲಾಡಳಿತ ಮತ್ತು ಶಾಲಾ ಶಿಕ್ಷಣ ಇಲಾಖೆ ಮಿಷನ್ ವಿದ್ಯಾಕಾಶಿ ಯೋಜನೆ ಮೂಲಕ ವಿನೂತನ ಕ್ರಮಗಳನ್ನು ಕೈಗೊಳ್ಳುತ್ತಿದೆ. ಶಿಕ್ಷಕರು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಿ, ಪ್ರಾಥಮಿಕ ಶಾಲೆ ಹಂತದಲ್ಲಿಯೇ ಮಕ್ಕಳನ್ನು ಸುಧಾರಿಸಲು ಪ್ರಯತ್ನಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಹೇಳಿದರು.

ಅವರು ಶುಕ್ರವಾರ ನಗರದ ಸರಕಾರಿ ಮಹಿಳಾ ತರಬೇತಿ ಕೇಂದ್ರ (ಟಿಸಿಡಬ್ಲು) ಆವರಣದಲ್ಲಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜಿಲ್ಲಾಡಳಿತ ಮತ್ತು ಶಾಲಾ ಶಿಕ್ಷಣ ಇಲಾಖೆಯಿಂದ ಆಯೋಜಿಸಿದ್ದ ಪ್ರಸಕ್ತ ಸಾಲಿನ ಶಾಲಾ ಪ್ರಾರಂಭೋತ್ಸವ ಹಾಗೂ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ, ಸಮವಸ್ತ್ರ ವಿತರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹಿಂದಿನ ಶಿಕ್ಷಣ ಪದ್ಧತಿಗೂ ಪ್ರಸ್ತುತ ಶಿಕ್ಷಣ ಪದ್ಧತಿಗೂ ಹೆಚ್ಚು ವ್ಯತ್ಯಾಸವಿದೆ. ಪ್ರಾಥಮಿಕ ಶಾಲಾ ಹಂತದಲ್ಲಿ ಮಕ್ಕಳಿಗೆ ಉತ್ತಮವಾದ ಶಿಕ್ಷಣವನ್ನು ಕೋಡುವುದು ಅವಶ್ಯವಿದೆ. ಸರಕಾರಿ ಶಾಲೆಗಳಲ್ಲಿ ನಾವು ಇನ್ನೂ ಉತ್ತಮವಾದ ಫಲಿತಾಂಶವನ್ನು ಕೊಟ್ಟರೆ ಶಾಲೆಯಲ್ಲಿನ ಮಕ್ಕಳ ಸಂಖ್ಯೆ ಹೆಚ್ಚಾಗುತ್ತದೆ. ಮಕ್ಕಳಲ್ಲಿ ಆತ್ಮವಿಶ್ವಾಸವನ್ನು ಹೆಚ್ಚಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವವಾಗಿದೆ. ಶಿಕ್ಷಕರು ಮಕ್ಕಳಿಗೆ ಉತ್ತಮವಾದ ಶಿಕ್ಷಣವನ್ನು ನೀಡಿದರೆ ಅವರ ಮುಂದಿನ ಭವಿಷ್ಯ ಉತ್ತಮವಾಗುತ್ತದೆ ಎಂದರು.



ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರಾಥಮಿಕ ಮತ್ತು ಪ್ರೌಢಶಾಲಾ ಹಂತದಲ್ಲಿರುವ ಶಿಕ್ಷಕರು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಬೇಕು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂದರು.

ಮುಖ್ಯ ಅತಿಥಿಗಳಾಗಿದ್ದ ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪರಶುರಾಮ ದೊಡ್ಡಮನಿ ಮಾತನಾಡಿ, ಶಿಕ್ಷಕರು ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಸಬೇಕಾದರೆ ಅವರಿಗೆ ಭಾಷಾ ಬಳಕೆ, ವ್ಯಾಕರಣವನ್ನು ಅರ್ಥವಾಗುವಂತೆ ಕಲಿಸಬೇಕು. ಇಂದು ಗುಣಮಟ್ಟದ ಶಿಕ್ಷಣ ಅವಶ್ಯವಿದೆ. ಮಕ್ಕಳು ಶಿಕ್ಷಣದಿಂದ ವಂಚಿತರಾಗದ ಹಾಗೆ ನೋಡಿಕೊಳ್ಳುವ ಜವಾಬ್ದಾರಿಯೂ ಶಿಕ್ಷಕರಿಗೆ ಇರುತ್ತದೆ. ಶಿಕ್ಷಕರಾದವರು ಮಕ್ಕಳಲ್ಲಿ ತಾರತಮ್ಯ ಕಾಣದೆ, ಎಲ್ಲರೂ ಒಂದೇ ಎಂದು ತಿಳಿದು ಪ್ರೀತಿ ವಿಶ್ವಾಸದಿಂದ ಬೆಳೆಸಬೇಕು ಎಂದರು.

ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿ ಎಸ್.ಎಂ. ಹುಡೇದಮನಿ ಸ್ವಾಗತಿಸಿದರು. ಧಾರವಾಡ ಶಹರದ ಕ್ಷೇತ್ರ ಶಿಕ್ಷಣಾಧಿಕಾರಿ ಅಶೋಕ ಸಿಂದಗಿ ಹಾಗೂ ಸಹ ಸಮನ್ವಯಾಧಿಕಾರಿ ರೇಣುಕಾ ಅಮಲಜೇರಿ ವೇದಿಕೆಯಲ್ಲಿ ಇದ್ದರು. ಎಸ್‌ಡಿಎಂಸಿ ಅಧ್ಯಕ್ಷೆ ಸೀಮಾ ಹುಗ್ಗಿ, ಧಾರವಾಡ ಟಿಸಿಡಬ್ಲು ಪ್ರಭಾರಿ ಪ್ರಾಚಾರ್ಯೆ ದಿಪ್ತಿ ಅಪಯ್ಯ, ಎಸ್‌ಡಿಎಮ್‌ಸಿ ಅಧ್ಯಕ್ಷ ಖ್ವಾಜಾಮಿಯಾ ದಫೇದಾರ ಹಾಗೂ ಮುಖ್ಯೋಪಾಧ್ಯರು, ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

## ನಿಮ್ಮ ನ್ಯಾಯಯುತ ಬೇಡಿಕೆಗಳು ಈಡೇರಲಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ಎರಡು-ಮೂರು ದಿನಗಳಿಂದ ನೀವು ನಡೆಸುತ್ತಿರುವ ಹೋರಾಟ ಗಮನಕ್ಕೆ ಬಂದಿದೆ. ನಿಮ್ಮ ನ್ಯಾಯಯುತವಾದ ಹೋರಾಟಕ್ಕೆ ನಾನು ಸಕಾರಾತ್ಮಕವಾಗಿ ಸ್ಪಂದಿಸುತ್ತೇನೆ ಎಂದು ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಇಲ್ಲಿನ ಪಟ್ಟಣ ಪಂಚಾಯಿತಿಯಲ್ಲಿ ತಮ್ಮ ಬೇಡಿಕೆಗಳ ಈಡೇರಿಕೆಗಾಗಿ ಹೋರಾಟ ನಡೆಸುತ್ತಿರುವ ಪೌರ ಕಾರ್ಮಿಕರ ಶಿಬಿರಕ್ಕೆ ಭೇಟಿ ನೀಡಿ ಅವರು ಮಾತನಾಡಿದರು.

ನಿಮ್ಮ ಎಲ್ಲ ಬೇಡಿಕೆಗಳನ್ನು ಸರಕಾರ ಶೀಘ್ರವೇ ಪರಿಹರಿಸಿ ನಿಮ್ಮ ಜೀವನಕ್ಕೆ ನೆಮ್ಮದಿ ನೀಡುತ್ತದೆ ಎಂದು ನಾನು ಆಶಿಸುತ್ತೇನೆ. ಈ ದಿಶೆಯಲ್ಲಿ ನಾನೂ ಸಹ ಸರಕಾರದ ಗಮನಕ್ಕೆ ತಂದು ಅವುಗಳು ಬೇಗನೆ ಈಡೇರುವಂತೆ ಮಾಡುವಲ್ಲಿ ಶ್ರಮಿಸುತ್ತೇನೆ.

ಪೌರ ಕಾರ್ಮಿಕರು ಪಟ್ಟಣದ ಸ್ವಚ್ಛತೆಯ ಜೊತೆಗೆ ಎಲ್ಲರಿಗೂ ಹಲವು ಸೇವೆಗಳನ್ನು ಒದಗಿಸಿ ಪಟ್ಟಣದ ಸೌಂದರ್ಯವನ್ನು ಕಾಪಾಡುತ್ತಿದ್ದೀರಿ. ಅಲ್ಲದೆ ಜನತೆ ನೆಮ್ಮದಿಯಿಂದ ಬದುಕಲು ಎಲ್ಲ ರೀತಿಯ ಅನುಕೂಲವನ್ನೂ ಮಾಡುತ್ತಿದ್ದೀರಿ. ಹೀಗಾಗಿ ನಿಮ್ಮ ಬೇಡಿಕೆಗಳು ಬೇಗನೆ ಈಡೇರಬೇಕೆಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಈ ಸಂದರ್ಭದಲ್ಲಿ ಧುರೀಣ-ರಾದ ಐ.ಎಸ್. ಪಾಟೀಲ, ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಸ್ಥಾಯಿ ಸಮಿತಿ ಅಧ್ಯಕ್ಷ ಮುತ್ತಪ್ಪ ನೂಲ್ಕಿ, ಸದಸ್ಯರು, ಪೌರಸೇವಾ ನೌಕರರ ಸಂಘದ ಜಿಲ್ಲಾಧ್ಯಕ್ಷ ರಮೇಶ ಹಲಗಿಯವರ, ಘಟಕದ ಅಧ್ಯಕ್ಷ ನೀಲಪ್ಪ ಚಳ್ಳಮರದ, ಅಲ್ಲಾಭಕ್ಷಿ ನದಾಫ್, ಮೈಲಾರಪ್ಪ ಚಳ್ಳಮರದ, ಹೋರಾಟಗಾರರು ಉಪಸ್ಥಿತರಿದ್ದರು.

---

### ನಟ ಕಮಲ್ ಹಾಸನ್ ಹೇಳಿಕೆಯನ್ನು ಖಂಡಿಸಿ ಕರವೇ ವತಿಯಿಂದ ಪ್ರತಿಭಟನೆ

# ಕಮಲ್ ಹಾಸನ್ ಕನ್ನಡಿಗರ ಕ್ಷಮೆ ಕೇಳಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಟಿಪ್ಪು ಸರ್ಕಲ್‌ನಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್. ಅಬ್ಬಿಗೇರಿ ನೇತೃತ್ವದಲ್ಲಿ ಮಾನವ ಸರಪಳಿಯನ್ನು ನಿರ್ಮಿಸಿ, ಕನ್ನಡಿಗರ ಭಾವನೆಗಳಿಗೆ ಧಕ್ಕೆ ತರುವಂತೆ ತಮಿಳು ಭಾಷೆಯಿಂದ ಕನ್ನಡ ಭಾಷೆಯು ಉಗಮವಾಗಿದೆ ಎಂದು ಹೇಳಿಕೆ ನೀಡಿದ ತಮಿಳು ನಟ, ರಾಜಕಾರಣಿ ಕಮಲ್ ಹಾಸನ್‌ರ ಭಾವಚಿತ್ರವನ್ನು ದಹಿಸಿ ಪ್ರತಿಭಟನೆ ನಡೆಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಹನಮಂತಪ್ಪ ಅಬ್ಬಿಗೇರಿ, ಈ ಕೂಡಲೇ ಕಮಲ್ ಹಾಸನ್ ಕರ್ನಾಟಕದ ಜನತೆಯ ಕ್ಷಮೆ ಯಾಚಿಸಬೇಕು. ಅವರು ನಟಿಸಿರುವ 'ಥಗ್ ಲೈಫ್' ಚಲನಚಿತ್ರವನ್ನು ಕರ್ನಾಟಕ ರಾಜ್ಯಾದಲ್ಲಿ ಬಿಡುಗಡೆ ಮಾಡಬಾರದೆಂದು ಕರ್ನಾಟಕ ವಾಣಿಜ್ಯ ಚಿತ್ರಮಂಡಳಿಗೆ ಒತ್ತಾಯಿಸಿದರಲ್ಲದೆ, ಗದಗ ಜಿಲ್ಲೆಯಲ್ಲಿ ಈ ಚಿತ್ರ ಬಿಡುಗಡೆಯಾದರೆ ಚಿತ್ರಮಂದಿರಕ್ಕೆ ಬೆಂಕಿ ಹಚ್ಚುವುದಾಗಿ ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಬಸವರಾಜ ಹೊಗೆಸೊಪ್ಪಿನ, ನಿಂಗನಗೌಡ ಮಾಲಿಪಾಟೀಲ, ವಿನಾಯಕ ಬದಿ, ನಬೀಸಾಬ ಕಿಲ್ಲೇದಾರ, ಆಶಾ ಜೂಲಗುಡ್ಡ, ತೌಸಿಫ ಢಾಲಾಯತ, ಮುತ್ತಣ್ಣ ಚವಡಣ್ಣವರ, ದಾದಾಪೀರ ನದಾಫ್, ದಾವಲಸಾಬ ತಹಸೀಲ್ದಾರ, ಯಲ್ಲಪ್ಪ ಭೋವಿ, ಲೋಕೇಶ ಸುತಾರ, ಪ್ರವೀಣ ಗಾಣಗೇರ, ಚನ್ನಬಸಯ್ಯ ಗಡ್ಡದೇವರಮಠ, ಸಿರಾಜ್ ಹೊಸಮನಿ, ರಜಾಕ್ ಢಾಲಾಯತ, ಬಸವರಾಜ ರಗಟಿ, ಗೌಸು ಶಿರಹಟ್ಟಿ, ಮಹಾದೇವಿ ದೊಡ್ಡಗೌಡ್ರ, ಪ್ರಕಾಶ ಹಡೇದ, ರಾಮನಗೌಡ ಹಳೇಮನಿ, ಹುಸೇನಸಾಬ ಕುಂಡಾಲಿ, ಮಾರುತಿ ಈಳಗೇರ, ಕೊಂಚಿಗೇರಮಠ ಸೇರಿದಂತೆ ಕರವೇ ಕಾರ್ಯಕರ್ತರು ಪಾಲ್ಗೊಂಡಿದ್ದರು.

ಕನ್ನಡ ಭಾಷೆ 2 ಸಾವಿರ ವರ್ಷಗಳ ಇತಿಹಾಸವನ್ನು ಹೊಂದಿರುವ ಶ್ರೀಮಂತ ಭಾಷೆಯಾಗಿದೆ. ಕನ್ನಡ ಭಾಷೆಯಲ್ಲಿ ಅನೇಕ ಪ್ರಸಿದ್ಧ ಶರಣರು, ಸಂತರು, ದಾರ್ಶನಿಕರು, ರಾಜ ಮಹಾರಾಜರು, ಕವಿಗಳು, ಲೇಖಕರು ದೇಶದಲ್ಲಿಯೇ ಪ್ರಸಿದ್ಧಿಯನ್ನು ಪಡೆದಿದ್ದಾರೆ. ಕನ್ನಡಕ್ಕೆ ಭಾರತ ದೇಶದಲ್ಲಿಯೇ ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿ ಲಭಿಸಿದೆ. ಇಂತಹ ಶ್ರೀಮಂತ ಭಾಷೆಯನ್ನು ಅವಮಾನಿಸಿರುವ ಕಮಲ್ ಹಾಸನ್ ಅವರ ಹೇಳಿಕೆ ಅತ್ಯಂತ ಕೀಳುಮಟ್ಟದ್ದಾಗಿದೆ ಎಂದು ಹನಮಂತಪ್ಪ ಅಬ್ಬಿಗೇರಿ ಹೇಳಿದರು.

## ಗದಗ ಸಿಟಿ ಫುಟ್ಬಾಲ್ ಕ್ಲಬ್‌ಗೆ AFC 'A' LICENCE DIPLOMA ಕೋಚ್ ಭೇಟಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಸಿಟಿ ಫುಟ್ಬಾಲ್ ಕ್ಲಬ್‌ನಲ್ಲಿ ನಡೆದ ವಿಶೇಷ ಕಾರ್ಯಕ್ರಮದಲ್ಲಿ ಆಲ್ ಇಂಡಿಯಾ ಫುಟ್ಬಾಲ್ ಫೆಡರೇಷನ್(AIFF )ಹಾಗೂ ಕರ್ನಾಟಕ ಸ್ಟೇಟ್ ಫುಟ್ಬಾಲ್ ಅಸೋಸಿಯೇಷನ್ (KSFA) ವತಿಯಿಂದ AFC 'A' LICENCE DIPLOMA ಕೋಚ್ ಶ್ರೀಮಾನ್ ಶಿವಕುಮಾರ್ ವರದರಾಜ್ ಅವರು ವಿಶೇಷ ಭೇಟಿ ನೀಡಿದರು.

ಗದಗ್ ಜಿಲ್ಲೆಯ ಯುವ ಪ್ರತಿಭೆಗಳಿಗಾಗಿ ಯುವ ಅಭಿವೃದ್ಧಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದ್ದು, ಇದರ ಪ್ರಮುಖ ಉದ್ದೇಶ ಆಟಗಾರರ ಕೌಶಲ್ಯವನ್ನು ಮೇಲಕ್ಕೆತ್ತುವದು, ಅವರ ಸಾಮರ್ಥ್ಯವನ್ನು ಗುರುತಿಸಿ ತಾಂತ್ರಿಕ ಹಾಗೂ ತಂತ್ರಜ್ಞಾನ ಸಂಬಂಧಿತ ಮಾರ್ಗದರ್ಶನ ನೀಡುವುದಾಗಿದೆ.

ಶಿವಕುಮಾರ್ ಅವರು ಆಟಗಾರರ ಅಭ್ಯಾಸ ಕ್ರಮವನ್ನು ಪರಿಶೀಲಿಸಿ, ಶಕ್ತಿಶಾಲಿ ಆಟಗಾರರನ್ನು ಗುರುತಿಸಿ, ಅವರ ಶಕ್ತಿಯನ್ನು ಹೆಚ್ಚಿಸುವ ತರಬೇತಿ ವಿಧಾನಗಳ ಬಗ್ಗೆ ೦ಖಈಈ ನಿಂದ ಮಾನ್ಯತೆ ಪಡೆದ ಸ್ಥಳೀಯ ತರಬೇತುದಾರರಿಗೆ ಮಾರ್ಗದರ್ಶನ ನೀಡಿದರು. ಆಟಗಾರರ ದೌರ್ಬಲ್ಯಗಳನ್ನು ಗುರುತಿಸಿ, ಅವುಗಳನ್ನು ಸುಧಾರಿಸಲು ವಿಶೇಷ ಅಭ್ಯಾಸ ಕಾರ್ಯಕ್ರಮ ರೂಪಿಸಲಾಯಿತು.

ಈ ಭೇಟಿಯಿಂದ ಯುವ ಆಟಗಾರರಲ್ಲಿ ಹೊಸ ಆತ್ಮವಿಶ್ವಾಸ ಮೂಡಿದ್ದು, ತಮ್ಮ ಪ್ರತಿಭೆಯನ್ನು ಉತ್ತಮಗೊಳಿಸಲು ಪ್ರೇರಣೆಯಾಯಿತು.

ಮಕ್ಕಳಲ್ಲಿನ ಕೌಶಲ್ಯ ಮತ್ತು ಆಟದ ಕುರಿತು ಕೋಚ್‌ಗಳಿಗೆ ಮಾರ್ಗದರ್ಶನ ನೀಡಿದರು.

ಗದಗ್ ಸಿಟಿ ಫುಟ್ಬಾಲ್ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿ, "ಇಂತಹ ಶಿಬಿರಗಳು ಮುಂದುವರಿಯಬೇಕು, ಯುವ ಪ್ರತಿಭೆಗಳಿಗೆ ಸದಾ ಬೆಂಬಲ ನೀಡಬೇಕು" ಎಂದು ಸಲಹೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಅಧ್ಯಕ್ಷರಾದ ಸ್ಯಾಮ್ಸನ್ ಡಾನ್, ಕಾರ್ಯದರ್ಶಿ ರಾಮಚಂದ್ರ ಮುಂಡರಗಿ, ತಾಜುದ್ದೀನ್ ಶೇಖ, ರಿಚರ್ಡ್ ಧರ್ಮದಾಸ್, ಅಗಸ್ಟೀನ್ ಜಾನ್, ಎಡ್ವರ್ಡ್ ಧರ್ಮದಾಸ್, ರಾಘವೇಂದ್ರ ಮುಂಡರಗಿ, ರವಿ ಆಡಗಲ್, ಯಾಸಿನ್ ಈಟಿ, ವಿಲ್ಸನ್,

ಸರ್ಫರಾಜ್ ಶೇಖ ಹಾಗೂ ಶಶಿಕುಮಾರ್ ಮುಂಡರಗಿ, ಬಸವರಾಜ ಹಡಪದ ಉಪಸ್ಥಿತರಿದ್ದರು.

### ಜಿಲ್ಲಾಡಳಿತದಿಂದ ಮಲೇರಿಯಾ ತಡೆಗಟ್ಟಲು ಕೈಗೊಂಡ ಕ್ರಮಗಳ ಕುರಿತು ವಿಶೇಷ ಲೇಖನ

# 'ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ'

'ಮುಂಗಾರು ಮಳೆ ಪ್ರಾರಂಭಗೊಂಡಿದೆ. ಮಳೆಗಾಲದ ಸಮಯದಲ್ಲಿ ಹಲವಾರು ಕಾಯಿಲೆಗಳು ಮನುಷ್ಯರನ್ನು ಕಾಡುತ್ತವೆ. ಅವುಗಳಲ್ಲಿ ಶೀತ, ಕೆಮ್ಮು, ತಲೆನೋವು, ಜ್ವರ, ಮೈಕೈ ನೋವು ಸಹಜವಾಗಿ ಮಕ್ಕಳು, ವೃದ್ಧರು, ಮಹಿಳೆಯರು, ಪುರುಷರು ಸೇರಿ ಎಲ್ಲ ವಯೋಮಾನದವರನ್ನು ಭಾದಿಸುತ್ತವೆ. ಮಳೆಗಾಲದ ಸಮಯದಲ್ಲಿ ಬಂದು ಹೋಗುವ ಹಲವಾರು ಕಾಯಿಲೆಯ ಜೊತೆಗೆ ಮಲೇರಿಯಾ, ಡೆಂಗ್ಯೂ, ಚಿಕುನ್ ಗೂನ್ಯದಂತಹ ದೊಡ್ಡ ಪ್ರಮಾಣದ ಕಾಯಿಲೆಗಳು ಭಾದಿಸಲು ಶುರು ಮಾಡಿಕೊಂಡಿವೆ. ಇವುಗಳಿಂದ ರಕ್ಷಿಸಿಕೊಳ್ಳಲು ಹತ್ತು ಹಲವಾರು ಮುಂಜಾಗೃತಾ ಕಾರ್ಯಾಗಾರಗಳು ಮತ್ತು ಮುನ್ನೆಚ್ಚರಿಕೆ ಕ್ರಮಗಳನ್ನು ವೈದ್ಯರ ಸಲಹೆಯಂತೆ ತೆಗೆದುಕೊಳ್ಳುವುದು ಸಾರ್ವಜನಿಕರ ಜವಬ್ದಾರಿಯಾಗಿದೆ.



ಮಲೇರಿಯಾದ ಯಾವುದೇ ರೋಗಲಕ್ಷಣಗಳನ್ನು ಕಂಡುಬಂದರೆ, ವಿಶೇಷವಾಗಿ ಮಲೇರಿಯಾ ಹರಡುವ ಹೆಚ್ಚಿನ ಅಪಾಯವಿರುವ ಪ್ರದೇಶಕ್ಕೆ ಇತ್ತೀಚೆಗೆ ಪ್ರಯಾಣಿಸಿದ್ದರೆ, ತಕ್ಷಣವೇ ವೈದ್ಯಕೀಯ ಆರೈಕೆಯನ್ನು ಪಡೆಯಬೇಕು. ಸಮಯೋಚಿತ ರೋಗ ನಿರ್ಣಯ ಮತ್ತು ಸರಿಯಾದ ಚಿಕಿತ್ಸೆಯು ಗಂಭೀರ ತೊಡಕುಗಳನ್ನು ತಡೆಯಲು ಮತ್ತು ಜೀವಗಳನ್ನು ಉಳಿಸಲು ಸಹಾಯ ಮಾಡುತ್ತದೆ.

ಮಲೇರಿಯಾ ಎಂದರೆ ಸಾಂಕ್ರಾಮಿಕ ರೋಗವಲ್ಲ. ಅಂದರೆ ಅದು ವ್ಯಕ್ತಿಯಿಂದ ವ್ಯಕ್ತಿಗೆ ಹರಡುವುದಿಲ್ಲ. ಇದು ಸೋಂಕಿತ ಹೆಣ್ಣು ಅನಾಫಿಲಿಸ್ ಸೊಳ್ಳೆಯ ಕಚ್ಚುವಿಕೆಯ ಮೂಲಕ ಹರಡುತ್ತದೆ. ಮಲೇರಿಯಾ ನಿಯಂತ್ರಣಕ್ಕೆ ಸೊಳ್ಳೆಗಳ ಕಾಟ ತಡೆಯುವುದು ಅತ್ಯಗತ್ಯ. ಸೊಳ್ಳೆ ನಿವಾರಕಗಳನ್ನು ಬಳಸುವುದು, ರಕ್ಷಣಾತ್ಮಕ ಬಟ್ಟೆಗಳನ್ನು ಧರಿಸುವುದು ಮತ್ತು ಸೊಳ್ಳೆ ಪರದೆಗಳ ಅಡಿಯಲ್ಲಿ ಮಲಗುವುದು ಸುಲಭ ಉಪಾಯ. ಅಲ್ಲದೆ, ನಿಂತ ನೀರನ್ನು ತೆಗೆದುಹಾಕುವ ಮೂಲಕ ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ನಿರ್ಮೂಲನೆ ಮಾಡುವುದು ಸೊಳ್ಳೆಗಳ ಸಂಖ್ಯೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಮಲೇರಿಯಾದ ಲಕ್ಷಣಗಳು ಸಾಮಾನ್ಯವಾಗಿ ಸೋಂಕಿನ ನಂತರ 10 ದಿನಗಳಿಂದ 4 ವಾರಗಳವರೆಗೆ ಬೆಳವಣಿಗೆಯಾಗುತ್ತವೆ. ಸೋಂಕಿಗೆ ಕಾರಣವಾದ ಪ್ಲಾಸ್ಮೋಡಿಯಂ ಪರಾವಲಂಬಿ ಪ್ರಕಾರವನ್ನು ಅವಲಂಬಿಸಿ ಬದಲಾಗಬಹುದು. ಮಲೇರಿಯಾದ ಕೆಲವು ಸಾಮಾನ್ಯ ಲಕ್ಷಣಗಳೆಂದರೆ, ಜ್ವರ, ತಲೆನೋವು, ಸ್ನಾಯುನೋವು, ಆಯಾಸ, ಬೆವರುವಿಕೆ, ವಾಕರಿಕೆ ಇತ್ಯಾದಿ.

ಡೆಂಗ್ಯೂ, ಚಿಕುಂಗುನ್ಯ ರೋಗವು ಈಡಿಸ್ ಇಜಿಪ್ಟೆ ಸೊಳ್ಳೆಯ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ. ಈ ಸೊಳ್ಳೆಯು ಸ್ವಚ್ಛವಾದ ನೀರಿನಲ್ಲಿ ಮೊಟ್ಟೆಗಳನ್ನಿಟ್ಟು, ತನ್ನ ವಂಶಾಭಿವೃದ್ಧಿಯನ್ನು ಮಾಡುತ್ತದೆ. ಈ ರೋಗದಲ್ಲಿ ವಿಪರೀತ ಜ್ವರ ಮೈ-ಕೈ ನೋವು, ತಲೆ ನೋವು ಹಾಗೂ ಕಣ್ಣುಗಳು ಕೆಂಪಾಗುವುಕೆ ಲಕ್ಷಣಗಳು ಕಂಡು ಬರುತ್ತವೆ.

ಈಡೀಸ್ ಜಾತಿಯ ಸೊಳ್ಳೆಗಳು ವಿಶಿಷ್ಠ ಲಕ್ಷಣಗಳಾದ ಹಗಲು ಹೊತ್ತಿನಲ್ಲಿ ಮನುಷ್ಯರನ್ನು ಕಚ್ಚುವವು, ಶುದ್ಧವಾದ ನೀರಿನಲ್ಲಿ ಮತ್ತು ನೀರು ಶೇಖರಣಾ ಪರಿಕರಗಳು, ಘನ ತ್ಯಾಜ್ಯ ವಸ್ತುಗಳಲ್ಲಿ ಸಂಗ್ರಹವಾಗುವ ನೀರಿನಲ್ಲಿ ವಂಶಾಭಿವೃದ್ಧಿಯಾಗುವ ಕುರಿತು ಜಾಗೃತಿ ಮೂಡಿಸಬೇಕು. ಈಡಿಸ್ ಸೊಳ್ಳೆಗಳು, ಮೊಟ್ಟೆಗಳು, ಸೂಕ್ತಾವಸ್ಥೆಯಲ್ಲಿ ತಿಂಗಳಗಟ್ಟಲೆ ಇರುವ ಕುರಿತು ತಿಳಿಸಿ, ಫೈಬರ್ ಬಕೆಟುಗಳಲ್ಲಿ, ಸಂಗ್ರಹವಿರುವ ನೀರಿನಲ್ಲಿ ಈಡೀಸ್ ಸೊಳ್ಳೆಗಳು ಉತ್ಪತ್ತಿಯಾಗುತ್ತವೆ ಮತ್ತು ನಿಯಂತ್ರಣಕ್ಕಾಗಿ ಲಾರ್ವಾ ನಾಶಕ ಬಳಸುವುದು, ಪ್ಲಾಸ್ಟಿಕ್ ಹೊದಿಕೆಯಿಂದ ನೀರು ಶೇಖರಣೆಯಾಗದಂತೆ ನೋಡಿಕೊಳ್ಳುವುದು, ಸೊಳ್ಳೆ ನಿರೋಧಕಗಳನ್ನು ಬಳಸುವುದು ಅವಶ್ಯವಾಗಿದೆ.

ಈ ರೋಗಕ್ಕೆ ನಿಖರವಾದ ಚಿಕಿತ್ಸೆಯಿಲ್ಲ. ರೋಗದ ಲಕ್ಷಣಗಳ ಆಧಾರದ ಮೇಲೆ ಚಿಕಿತ್ಸೆ ನೀಡಲಾಗುವುದು. ಅದಕ್ಕಾಗಿ ಈ ರೋಗದ ಬಗ್ಗೆ ಜನರಿಗೆ ಹೆಚ್ಚಿನ ಅರಿವನ್ನು ಮೂಡಿಸಬೇಕು. ಈ ರೋಗ ಬರದ ಹಾಗೆ ಮುನ್ನೆಚರಿಕೆ ಕ್ರಮಗಳನ್ನು ವಹಿಸಬೇಕು. ಮನೆಯ ಸುತ್ತಮುತ್ತ ನೀರು ನಿಲ್ಲದ ಹಾಗೆ ಸ್ವಚ್ಛವಾಗಿ ಇಡಬೇಕು ಮತ್ತು ಮನೆಯ ಒಳಗೆ ನೀರು ತುಂಬುವ ಪಾತ್ರೆಗಳನ್ನು ವಾರಕ್ಕೊಮ್ಮೆ ಸ್ವಚ್ಛವಾಗಿ ತೊಳೆದು ಒಣಗಿಸಿ ನೀರು ತುಂಬಿ ಮೇಲೆ ಮುಚ್ಚಬೇಕು.

ಮನೆಯ ಕಿಡಕಿಗಳಿಗೆ ಜಾಲರಿಗಳನ್ನು ಬಳಸಬೇಕು, ಮಲಗುವಾಗ ಸೊಳ್ಳೆ ಪರದೆಗಳನ್ನು ಬಳಸಬೇಕು. ಸಾಯಂಕಾಲ ಬೇವಿನ ಸೊಪ್ಪಿನ ಹೊಗೆ ಹಾಕಬೇಕು ಮತ್ತು ಯಾವುದೇ ವಿಧದ ಜ್ವರವಿದ್ದಲ್ಲಿ ಮೊದಲು ರಕ್ತ ಪರೀಕ್ಷೆ ಮಾಡಿಸಬೇಕು.

ಜಿಲ್ಲಾಡಳಿತದಿಂದ ಜಿಲ್ಲಾ ಮಟ್ಟದ ರಾಷ್ಟ್ರೀಯ ಡೆಂಗೀ ದಿನ, ಜಾಥಾ ಮತ್ತು ಮಾನವ ಸರಪಳಿ ಪ್ರದರ್ಶನಗಳ ಮೂಲಕ ಜಾಗೃತಿ ಮೂಡಿಸಲಾಗಿದೆಯಲ್ಲದೆ, ಜಿಲ್ಲೆಯಲ್ಲಿ ಡೆಂಗೀ ನಿಯಂತ್ರಣ ಮಾಡಲು ಗುಣಮಟ್ಟದ ಲಾರ್ವಾ ಸಮೀಕ್ಷೆ ಹಾಗೂ ಜ್ವರ ಸಮೀಕ್ಷೆ ಮಾಡಿ ಖಚಿತ ಪ್ರಕರಣಗಳು ಕಂಡುಬಂದಲ್ಲಿ ಸೂಕ್ತ ಚಿಕಿತ್ಸೆ ನೀಡಿ, ಸೂಕ್ತ ಆರೈಕೆ ಹಾಗೂ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗು ಸಿಬ್ಬಂದಿ ವರ್ಗದವರಿಗೆ ಕರೆ ನೀಡಲಾಗಿದೆ.

ಗದಗ-ಬೆಟಗೇರಿ ನಗರಸಭೆ ಪೌರ ಕಾರ್ಮಿಕರಿಗೆ ಮಲೇರಿಯಾ ಮುನ್ನೆಚರಿಕಾ ಅರಿವು ಮೂಡಿಸುವ ಕಾರ್ಯಕ್ರಮಗಳು ಮತ್ತು ರಾಷ್ಟ್ರೀಯ ಡೆಂಗೀ ದಿನದ ಅಂಗವಾಗಿ ಜಿಲ್ಲಾ ಮಟ್ಟದ ಜಾಥಾ, ಮಾನವ ಸರಪಳಿ ಪ್ರದರ್ಶನ, ಜನಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಿದೆ.

**-ರಾಘವೇಂದ್ರ ಶಾಂತಗೇರಿ.**
ಅಪ್ರೆಂಟಿಸ್, ವಾರ್ತಾ ಮತ್ತು ಸಾ.ಸಂ. ಇಲಾಖೆ.
ಗದಗ.

ಡೆಂಗೀ ನಿವಾರಣೆ ನಿಟ್ಟಿನಲ್ಲಿ ಸಮುದಾಯ ಪಾತ್ರ ಮಹತ್ವದಾಗಿದ್ದು, ಈ ನಿಟ್ಟಿನಲ್ಲಿ ಅಗ್ಯತ ಸಾರ್ವಜನಿಕರ ಸಹಕಾರ ದೊರೆತಾಗ ಮಾತ್ರ ಗುರಿ ಸಾಧನೆಯು ಸುಲಭ ಸಾಧ್ಯವಾಗುತ್ತದೆ. ಈ ವರ್ಷದ ಸರ್ಕಾರದ ಘೋಷ ವಾಕ್ಯವಾದ 'ಡೆಂಗೀ ಸೋಲಿಸಲು ಹೆಜ್ಜೆಗಳನ್ನು ಪರಿಶೀಲಿಸಿ, ಸ್ವಚ್ಚಗೊಳಿಸಿ, ಮುಚ್ಚಿಡಿ' ಇದಕ್ಕೆ ಉತ್ತೇಜನ ನೀಡೋಣ.

**– ಡಾ. ಹೆಚ್.ಎಲ್. ಗಿರಡ್ಡಿ.**
ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳು, ಗದಗ.

### ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅಧ್ಯಕ್ಷತೆಯಲ್ಲಿ ಡಿಡಿಎಮ್ ಸಭೆ

# ಜೀವ ಹಾನಿ ಆಗದಂತೆ ನಿಗಾ ವಹಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಬೆಣ್ಣೆ ಮತ್ತು ತುಪ್ಪರಿ ಹಳ್ಳದ ಅಂಚೆಯಲ್ಲಿರುವ ಗ್ರಾಮಗಳಲ್ಲಿ ರಾತ್ರಿ ವೇಳೆ ಪ್ರವಾಹ, ಅತಿವೃಷ್ಠಿಯಿಂದ ಆಗುವ ಹಾನಿ ತಪ್ಪಿಸಲು ಕ್ರಮ ವಹಿಸಬೇಕು ಎಂದು ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಹೇಳಿದರು.



ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಜಿಲ್ಲೆಯಲ್ಲಿ ಮೇ 22 ರಿಂದ ಸರಿಯುತ್ತಿರುವ ಅಕಾಲಿಕ ಮಳೆಯಿಂದ ಜಿಲ್ಲೆಯ ಕಲಘಟಗಿ ಮತ್ತು ಧಾರವಾಡ ಭಾಗಗಳಲ್ಲಿ ಅತಿ ಹೆಚ್ಚು ಮಳೆಯಾಗಿದ್ದು, ಪೂರ್ವ ಮುಂಗಾರಿನಿಂದ ಧಾರವಾಡ ತಾಲೂಕು ಮತ್ತು ಕುಂದಗೋಳ ತಾಲೂಕಿನಲ್ಲಿ 2 ಜನ ಸಿಡಿಲು ಬಡಿದು ಸಾವನ್ನಪ್ಪಿದ್ದಾರೆ. ಅವರ ಕುಟುಂಬದವರಿಗೆ ಪರಿಹಾರ ಕೊಡಲಾಗಿದೆ ಎಂದು ಹೇಳಿದರು.

ಅವರು ಇತ್ತೀಚೆಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಜರುಗಿಸಿ ಮಾತನಾಡಿದರು.

ತುಪ್ಪರಿ ಹಳ್ಳ ಮತ್ತು ಬೆಣ್ಣೆ ಹಳ್ಳ ಕೆಲವು ಭಾಗಗಳಲ್ಲಿ ತುಂಬಿ ಹರಿಯುತ್ತಿದ್ದು, ಪ್ರಾಣ ಹಾನಿಯಾಗದಂತೆ ನೋಡಿಕೊಳ್ಳಬೇಕು. ಅದೇ ರೀತಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಹಾಗೂ ವಿದ್ಯುತ್ ತಂತಿಗಳು, ಕಂಬಗಳು ಬೀಳದ ಹಾಗೆ ಎಚ್ಚರವಹಿಸಿ ಯಾವುದೇ ಜೀವ ಹಾನಿ ಆಗದಂತೆ ನಿಗಾ ವಹಿಸಬೇಕು. ಕೋವಿಡ್ ಬಂದಿರುವುದರಿಂದ ಮುನ್ನೆಚ್ಚರಿಕೆ ವಹಿಸಿ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಹೇಳಿದರು. ಪ್ರಸಕ್ತ ಸಾಲಿಗೆ ಸಮೀಕ್ಷೆ ಮಾಡಿದಾಗ ವಿವಿಧ ಶಾಲೆಗಳ ಸುಮಾರು 62 ಕೊಠಡಿಗಳು ಸೋರಿಕೆ ಆಗುತ್ತಿವೆ. ಇವುಗಳ ತುರ್ತು ದುರಸ್ತಿಗೆ ಕ್ರಮ ವಹಿಸಬೇಕು. ಶಾಲೆಗಳು ಆರಂಭವಾಗುವ ಪೂರ್ವದಲ್ಲಿ ಶಾಲಾ ಕೊಠಡಿಗಳು ರಿಪೇರಿ ಆಗಬೇಕು ಎಂದು ಅವರು ತಿಳಿಸಿದರು. ಹೆಸ್ಕಾಂ ಅಧಿಕಾರಿಗಳು ವಿದ್ಯತ್ ತೊಂದರೆ ಆಗದಂತೆ ಎಚ್ಚರಿಕೆ ವಹಿಸಬೇಕು. ವಿದ್ಯುತ್ ಕಂಬಗಳು ವಾಲದಂತೆ ಹಾಗೂ ಬೀಳದಂತೆ ಮುಂಜಾಗೃತೆ ವಹಿಸಬೇಕು. ಕೃಷಿ ಇಲಾಖೆ ಅಧಿಕಾರಿಗಳು ರೈತರಿಗೆ ಅಗತ್ಯವಿರುವ ರಸಗೊಬ್ಬರ, ಬೀಜ ಹಾಗೂ ಕಳೆ ನಿಯಂತ್ರಕ ಔಷಧಿಗಳನ್ನು ವಿತರಿಸಬೇಕು. ಪ್ರತಿ ರೈತ ಸಂಪರ್ಕ ಕೇಂದ್ರದಲ್ಲಿ ಮಾಹಿತಿಯನ್ನು ರೈತರಿಗೆ ನೀಡಬೇಕು. ಖಾಸಗಿ ಅಂಗಡಿಗಳು ನಿಯಮಾನುಸಾರ ಬೀಜ, ಗೊಬ್ಬರಗಳನ್ನು ಮಾರಾಟ ಮಾಡಬೇಕೆಂದು ಸಚಿವರು ನಿರ್ದೇಶಿಸಿದರು. ಸಭೆಯಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಎಂ.ಬ್ಯಾಕೋಡ್, ಉಪ ಪೊಲೀಸ್ ಆಯುಕ್ತ ಮಾನಿಂಗ ನಂದಗಾವಿ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತ ಡಾ. ರುದ್ರೇಶ ಘಾಳಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

# ಗ್ರಾ.ಪಂ ನೂತನ ಸದಸ್ಯರ ಆಯ್ಕೆ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಶಿಗ್ಲಿ ಗ್ರಾಮ ಪಂಚಾಯಿತಿಯ ವಾರ್ಡ್ ನಂ-1ಕ್ಕೆ ಅಖಂಡಪ್ಪ ಬಸವಂತಪ್ಪ ಕರ್ಜೆಕಣ್ಣವರ ನೂತನ ಸದಸ್ಯರಾಗಿ ಆಯ್ಕೆಯಾಗಿದ್ದಾರೆ. ಈ ವಾರ್ಡಿನ ಸದಸ್ಯರು ನಿಧನರಾದ ಹಿನ್ನೆಲೆಯಲ್ಲಿ ತೆರವಾದ ಸ್ಥಾನಕ್ಕೆ ಮೇ.25ರಂದು ಚುನಾವಣೆ ಜರುಗಿತ್ತು. ಬುಧವಾರ ಲಕ್ಷ್ಮೇಶ್ವರದ ತಹಸೀಲ್ದಾರ ಕಚೇರಿಯಲ್ಲಿ ಮತದಾನ ಪ್ರಕ್ರಿಯೆ ನಡೆದು, ಚುನಾವಣೆಯಲ್ಲಿ ಪ್ರತಿಸ್ಪರ್ಧಿ ಶಾಂತವ್ವ ತಿಪ್ಪಣ್ಣ ಸ್ವಾದಿ ಅವರಿಗಿಂತ 209 ಮತಗಳ ಅಂತರಿಂದ ಗೆಲುವು ಸಾಧಿಸಿದ್ದಾರೆ. ಚುನಾವಣಾಧಿಕಾರಿಯಾಗಿ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಗೋಪಾಲ ನಾಯಕ ಕಾರ್ಯನಿರ್ವಹಿಸಿದರು. ತಹಸೀಲ್ದಾರ ವಾಸುದೇವ ಸ್ವಾಮಿ ಗೆಲುವು ಸಾಧಿಸಿದ ಅಭ್ಯರ್ಥಿಗೆ ಆಯ್ಕೆ ಪ್ರಮಾಣಪತ್ರ ನೀಡಿದರು.

# ಆಹಾರ ಪ್ಯಾಕೆಟ್, ಜಾಹಿರಾತುಗಳಲ್ಲಿ '100%' ಎಂಬ ಪದ ಬಳಸದಿರಿ: FSSAI ಸೂಚನೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಆಹಾರ ಲೇಬಲಿಂಗ್ ಮತ್ತು ಪ್ರಚಾರ ಸಾಮಗ್ರಿಗಳಲ್ಲಿ "100%" ಎಂಬ ಪದವನ್ನು ಬಳಸುವುದರ ವಿರುದ್ಧ ಭಾರತೀಯ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಪ್ರಾಧಿಕಾರ (FSSAI) ಪ್ರಬಲ ಸಲಹೆಯನ್ನು ನೀಡಿದ್ದು, ಈ ಪದವು ಗ್ರಾಹಕರನ್ನು ದಾರಿ ತಪ್ಪಿಸುತ್ತದೆ ಎಂದು ಅದು ಹೇಳಿದೆ. ಆಹಾರ ಪ್ಯಾಕೆಟ್ ಆಹಾರ ಲೇಬಲ್‌ಗಳು, ಪ್ಯಾಕೇಜಿಂಗ್ ಮತ್ತು ಪ್ರಚಾರದ ವಿಷಯದ ಮೇಲೆ ಈ ಪದವನ್ನು ಬಳಸದಂತೆ ಎಲ್ಲಾ ಆಹಾರ ವ್ಯಾಪಾರ ನಿರ್ವಾಹಕರಿಗೆ (FBO) ಅದು ನಿರ್ದೇಶನ ನೀಡಿದೆ.

## ಕವನ

# ಬನ್ನಿ ಬನ್ನಿ ಮಕ್ಕಳೇ...




ಬನ್ನಿ ಮಕ್ಕಳೇ ಶಾಲೆಗೆ ಹೋಗೋಣ.
ಬೇಸಿಗೆ ಹೋಯಿತು ಮಳೆಗಾಲ ಬಂತು
ಹಚ್ಚ ಹಸಿರಿನ ಗಿಡಗಳು
ಶಾಲೆಯ ಸುತ್ತಮುತ್ತ ಹೂವಿನ ಗಿಡಗಳು
ಹೊಸ ಪುಸ್ತಕಗಳು ಹೊಸ ಬ್ಯಾಗ್‌ಗಳು
ಹೊಸ ಸಮವಸ್ತ್ರಗಳು
ಗೆಳತಿ ಗೆಳೆಯರ ಮಾತುಗಳು
ಹೊಸ ಹೊಸ ವಿಚಾರಗಳು
ಆಡುತಾ ಓದುತ ನಲಿಯುತ
ಹೊಸ ಪಾಠಗಳನ್ನು ಕಲಿಯೋಣ
ಓದುತ ಬರೆಯುತ ಒಂದಿಷ್ಟು ಸಾಧಿಸೋಣ
ಬನ್ನಿ ಮಕ್ಕಳೇ ಶಾಲೆಗೆ ಹೋಗೋಣ.

**– ವಿ.ಎಂ.ಎಸ್. ಗೋಪಿ.**
ಸಾಹಿತಿಗಳು, ಬೆಂಗಳೂರು.

### ಸಹನೆ, ತಾಳ್ಮೆ, ಸೌಜನ್ಯತೆ ಮೂಲಕ ಸಾರ್ಥಕ ಸೇವೆ ಸಲ್ಲಿಸಿ ಇಂದು ಸೇವಾ ನಿವೃತ್ತಿ ಹೊಂದುತ್ತಿರುವ ನಿಮಿತ್ತ ಲೇಖನ

# ಸಾರ್ಥಕ ಶಿಕ್ಷಕ ಶಿವಾನಂದ ಹಡಪದ

ಶಿಕ್ಷಣ ಇಲಾಖೆಯಲ್ಲಿ ಸಹ ಶಿಕ್ಷಕರರಾಗಿ, ಕ್ಲಸ್ಟರ್ ಸಂಯೋಜಕರಾಗಿ, ಕ್ಷೇತ್ರ ಸಂಪನ್ಮೂಲ ಕೇಂದ್ರದ ಸಂಪನ್ಮೂಲ ವ್ಯಕ್ತಿಯಾಗಿ, ಮುಖ್ಯೋಪಾಧ್ಯಾಯರಾಗಿ ಗೌರವಯುತವಾಗಿ ಸೇವೆ ಸಲ್ಲಿಸಿದ ಅಪರೂಪದ ವ್ಯಕ್ತಿ ಶಿವಾನಂದ ಹಡಪದ. 1965ರ ಮೇ 10ರಂದು ಶೈಕ್ಷಣಿಕವಾಗಿ ಹಿಂದುಳಿದ ರೋಣ ತಾಲೂಕಿನ ಶಿಕ್ಷಕರ ಊರೆಂದೇ ಪ್ರಸಿದ್ಧವಾದ ಹುಲ್ಲೂರ ಗ್ರಾಮದ ಬಡ ಆಯಗಾರ ಸಂಪ್ರದಾಯ ಫಕೀರಪ್ಪ-ಮಾತೋಶ್ರೀ ನೀಲಮ್ಮ ದಂಪತಿಗಳ ಪುಣ್ಯಗರ್ಭದಲ್ಲಿ ಅಕ್ಕರೆಯ ಮಗನಾಗಿ ಜನಿಸಿದರು.



ಪ್ರಾಥಮಿಕ, ಪ್ರೌಢಶಾಲಾ ಶಿಕ್ಷಣವನ್ನು ಹುಟ್ಟೂರು ಹುಲ್ಲೂರ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ, ಪದವಿಪೂರ್ವ ಶಿಕ್ಷಣ ಶಿಕ್ಷಣವನ್ನು ಹೊಳೆಆಲೂರ ಶ್ರೀ ಕಲ್ಮೇಶ್ವರ ವಿದ್ಯಾಸಂಸ್ಥೆಯಲ್ಲಿ ಪಡೆದು ಟಿಸಿಎಚ್ ವ್ಯಾಸಂಗವನ್ನು ಶಿರಹಟ್ಟಿ ಶ್ರೀ ಜಗದ್ಗುರು ಫಕೀರೇಶ್ವರ ಶಿಕ್ಷಕರ ತರಬೇತಿ ಮಹಾವಿದ್ಯಾಲಯದಲ್ಲಿ, ಪದವಿ ಅಭ್ಯಾಸವನ್ನು ಗದಗಿನ ಕೆಎಸ್‌ಎಸ್ ಕಾಲೇಜಿನಲ್ಲಿ ಪೂರೈಸಿ ಬಾಹ್ಯವಾಗಿ ಬಿಎಸ್‌ಸಿ ಮತ್ತು ಎಮ್‌ಎ ಪದವಿ ಪಡೆದುಕೊಂಡರು.

1989 ಎಪ್ರಿಲ್ 3ರಂದು ಕೋಲಾರ ಜಿಲ್ಲೆಯ ಮಾಲೂರ ತಾಲೂಕಿನ ಆನಿಮಟ್ಟಿನಹಳ್ಳಿ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರಾಗಿ ತಮ್ಮ ಮೊದಲ ಸರಕಾರಿ ಸೇವೆಯನ್ನು ಪ್ರಾರಂಭಿಸಿದರು. 1992 ಜೂನ 9ರಂದು ಗದಗ ಜಿಲ್ಲೆಯ ಗಾವರವಾಡ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ವರ್ಗಾವಣೆಗೊಂಡು 2003ರವರಗೆ ಸುದೀರ್ಘ 11 ವರ್ಷಗಳ ಕಾಲ ಉತ್ತಮವಾಗಿ ಸೇವೆ ಸಲ್ಲಿಸಿ ಶಾಲೆಯ ಪ್ರಗತಿಗೆ ಕೈಜೋಡಿಸಿದರು. 2003ರಿಂದ 2012ರವರಗೆ ಗದಗ ಗ್ರಾಮೀಣ ವಲಯ ಹುಯಿಲಗೋಳ ಸಮೂಹ ಸಂಪನ್ಮೂಲ ಕೇಂದ್ರದ ಸಂಪನ್ಮೂಲ ವ್ಯಕ್ತಿಯಾಗಿ ಕಾರ್ಯ ನಿರ್ವಹಿಸಿದರು.

2012ರಿಂದ 2015ವರಗೆ ಗದಗ ಗ್ರಾಮೀಣ ಬಿಆರ್‌ಸಿ ಕ್ಷೇತ್ರ ಸಂಪನ್ಮೂಲ ವ್ಯಕ್ತಿಯಾಗಿ ಕ್ರಿಯಾಶೀಲವಾಗಿ ಸೇವೆ ಮಾಡಿದ್ದಾರೆ. 2015ರಲ್ಲಿ ಇವರ ಸೇವಾ ಹಿರಿತನ ಪರಿಗಣಿಸಿ ಇಲಾಖೆ ಮುಖ್ಯೋಪಾಧ್ಯಾಯರಾಗಿ ಬಡ್ತಿ ನೀಡಿ ಗದಗ ಗ್ರಾಮೀಣ ವಲಯದ ಅಂತೂರಬೆಂತೂರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ವರ್ಗಾವಣೆ ಮಾಡಿದಾಗ ಸಿಬ್ಬಂದಿಯವರ, ಗ್ರಾಮಸ್ಥರ, ಇಲಾಖೆಯ ಅಧಿಕಾರಿಗಳ ಸಹಕಾರದಿಂದ ಶಾಲೆಯ ಪ್ರಗತಿಗೆ ಶ್ರಮಿಸಿದರು.

2018ರಲ್ಲಿ ವಲಯ ವರ್ಗಾವಣೆಯಲ್ಲಿ ಮುಂಡರಗಿ ಶಹರದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಕೋಟೆ ನಂ-1ರಲ್ಲಿ 5 ವರ್ಷಗಳ ಕಾಲ ಉತ್ತಮವಾಗಿ ಸೇವೆ ಮಾಡಿದ ಅನುಭವ ಇವರಾಗಿದೆ. 2023ರಲ್ಲಿ ಹೆಚ್ಚುವರಿ ವರ್ಗಾವಣೆ ಮೂಲಕ ಮುಂಡರಗಿ ತಾಲೂಕಿನ ಸರಕಾರಿ ಹಿರಿಯ ಕನ್ನಡ ಹೆಣ್ಣು ಮಕ್ಕಳ ಪ್ರಾಥಮಿಕ ಶಾಲೆ ಶಿರೂರ(ಜಂತ್ಲಿ)ಗೆ ವರ್ಗಾವಣೆಗೊಂಡು ಉತ್ತಮವಾಗಿ ಕಾರ್ಯಮಾಡಿ 21-05-2025ರಂದು ಸೇವಾ ನಿವೃತ್ತಿ ಹೊಂದಲಿದ್ದಾರೆ.

ಎಸ್.ಎಫ್ ಹಡಪದ ತಮ್ಮ ಸೇವಾ ಅವಧಿಯಲ್ಲಿ ಮಕ್ಕಳಿಗೆ ಓದು-ಬರಹ, ಲೆಕ್ಕಗಳ ಕೌಶಲ್ಯವೃದ್ಧಿಗಾಗಿ ಸ್ಪರ್ಧೆ ಮಾಡಿ ಬಹುಮಾನ ನೀಡಿ ಪ್ರೋತ್ಸಾಹ ನೀಡಿದ್ದಾರೆ. ದಾಖಲಾತಿ, ಹಾಜರಾತಿ ಅಂದೋಲನ, ಚಿಣ್ಣರ ಅಂಗಳ, ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರುವದು, ಚಿಣ್ಣರ ದರ್ಶನ, ಸಾಹಸ ಶಿಬಿರ, ವಿದ್ಯೆ ಅರಸಿ ಬಂದ ಬಡ ವಿದ್ಯಾರ್ಥಿಗಳಿಗೆ ಆರ್ಥಿಕ ಸಹಾಯಂತಹ ಕ್ರಿಯಾತ್ಮಕ ಕೆಲಸ ಮಾಡಿದ ಅನುಭವ ಗುರುತಿಸಿ ಧಾರವಾಡದಲ್ಲಿ ಹಿಂದಿ ಶಿಕ್ಷಕ ರತ್ನ ಪ್ರಶಸ್ತಿ, ಬೆಂಗಳೂರಿನಲ್ಲಿ ಕರ್ನಾಟಕ ಪದ್ಮಭೂಷಣ ಪ್ರಶಸ್ತಿ, ಕರ್ನಾಟಕ ಶಿಕ್ಷಕ ರತ್ನ ಪ್ರಶಸ್ತಿ, ಕಲ್ಪತರು ಸಂಸ್ಥೆಯಿಂದ ಉತ್ತಮ ಶಿಕ್ಷಕ ಪ್ರಶಸ್ತಿ ಮತ್ತು 2021ರಲ್ಲಿ ಗದಗ ಜಿಲ್ಲೆಯ ಶಾಲಾ ಶಿಕ್ಷಣ ಇಲಾಖೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಿವೆ.

ಗದುಗಿನ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಪದವಿ ಮಹಾವಿದ್ಯಾಲಯದಲ್ಲಿ ಕನ್ನಡ ಉಪನ್ಯಾಸಕಿಯಾಗಿ ಸೇವೆ ಮಾಡುತ್ತಿರುವ ಸಹಧರ್ಮಿಣಿ ಗುರುಪಾದಮ್ಮ ಕಾಯಕದ, ಪ್ರೀತಿಯ ಮಾತೃ ಸ್ವರೂಪರಾದ ಅತ್ತೆ ಪಾರ್ವತೆಮ್ಮ, ತೋಂಟದಾರ್ಯ ಕಾಲೇಜನಲ್ಲಿ ಬಿಈಸಿಎಸ್ ಆಗಿ ಕೆಲಸ ಮಾಡುತ್ತಿರುವ ಮಗ ಹರೀಶ, ಪುತ್ರಿಯರಾದ ಬೆಳಗಾವಿ ಕೇಂದ್ರೀಯ ವಿದ್ಯಾಲಯದಲ್ಲಿ ಸೇವೆ ಸಲ್ಲಿಸುತ್ತಿರುವ ಲತಾ, ಶ್ವೇತಾ, ಜ್ಯೋತಿ, ಭಾರತೀಯ ಸೇನೆಯಲ್ಲಿ ಕಾರ್ಯ ಮಾಡುತ್ತಿರುವ ಅಳಿಯಂದಿಯರಾದ ದೇವರಾಜ ಹಡಪದ, ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನಿಂಗರಾಜ ಕನ್ನೂರ ಮತ್ತು ಸೊಸೆ ರಚನಾ ಅವರೊಂದಿಗೆ ವೈಯುಕ್ತಿಕವಾಗಿ ಹಸನಾದ ಬದುಕು ಸಾಗಿಸುತ್ತಿರುವ ಸ್ನೇಹಮಯ ಸಾರ್ಥಕ ಬದುಕು ಇವರದು. ಶಿವಾನಂದ ಹಡಪದ ಇವರ ವಿಶ್ರಾಂತ ಜೀವನ ಸದಾಕಾಲ ಸಂತಸ, ನೆಮ್ಮದಿಯಿಂದ ಕೂಡಿರಲೆಂದು ಶಿರೂರ ಗ್ರಾಮದ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು, ಶಾಲೆಯ ಶಿಕ್ಷಕ ಬಳಗ, ಅಕ್ಷರ ದಾಸೋಹ ಸಿಬ್ಬಂದಿ, ವಿದ್ಯಾರ್ಥಿಗಳು ಶುಭ ಹಾರೈಸಿದ್ದಾರೆ.



**– ವಿಶ್ವನಾಥ ಯ.ಕಮ್ಮಾರ.**
ಶಿಕ್ಷಕರು, ಗದಗ.



ಲಕ್ಷ್ಮೇಶ್ವರದ ಸರ್ಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಶುಕ್ರವಾರ ಶಾಲಾ ಪ್ರಾರಂಭೋತ್ಸವವನ್ನು ಮಕ್ಕಳಿಗೆ ಗುಲಾಬಿ ಹೂ ಸಿಹಿ ಹಾಗೂ ಪಠ್ಯಪುಸ್ತಕಗಳನ್ನು ವಿತರಿಸುವುದರೊಂದಿಗೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಮಲ್ಲೇಶಪ್ಪ ಬಸಾಪುರ, ಉಪಾಧ್ಯಕ್ಷೆ ನಿಖಿತಾ ಶೇರಖಾನೆ, ಮುಖ್ಯೋಪಾಧ್ಯಾಯ ಬಸವರಾಜ್ ಕುಂಬಾರ, ಎಸ್.ಡಿ. ಲಮಾಣಿ, ಎಚ್.ಡಿ. ನಿಂಗರೆಡ್ಡಿ, ಆರ್.ಎಂ. ಶಿರಹಟ್ಟಿ, ಎಲ್.ಎ. ಬಣಕಾರ, ಆರ್.ಕೆ. ಉಪನಾಳ, ಪ್ರೇಮ ಗಾಡಿ ಹಾಗೂ ವಿದ್ಯಾರ್ಥಿಗಳಿದ್ದರು.

## ಸರ್ಕಾರಿ ಅಧಿಕಾರಿಗಳ ಕಿರುಕುಳದಿಂದ ಬೇಸತ್ತು ಪತ್ನಿಯೊಂದಿಗೆ ಆತ್ಮಹತ್ಯೆಗೆ ಯತ್ನಿಸಿದ ಪತ್ರಕರ್ತ

■ ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಉತ್ತರ ಪ್ರದೇಶದ ಪಿಲಿಭಿತ್‌ನ ಸ್ಥಳೀಯ ಪತ್ರಕರ್ತ ಮತ್ತು ಅವರ ಪತ್ನಿಯೊಬ್ಬರು ಉಪವಿಭಾಗೀಯ ಮ್ಯಾಜಿಸ್ಟ್ರೇಟ್, ನಗರ ಪಂಚಾಯತ್ ಅಧ್ಯಕ್ಷರು ಮತ್ತು ಗುತ್ತಿಗೆದಾರರ ಮೇಲೆ ಕಿರುಕುಳ ನೀಡಿದ್ದಾರೆ ಎಂದು ಆರೋಪಿಸಿ ಗುರುವಾರ ಸಾಮಾಜಿಕ ಮಾಧ್ಯಮದಲ್ಲಿ ವೀಡಿಯೊ ಪೋಸ್ಟ್ ಮಾಡಿ ವಿಷ ಸೇವಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಶಿರಹಟ್ಟಿ ತಾಲೂಕಿನಾದ್ಯಂತ ವಾಡಿಕೆಗಿಂತ ಹೆಚ್ಚಿನ ಮಳೆ । ರೈತರ ಮೊಗದಲ್ಲಿ ಹರ್ಷ

# ಗರಿಗೆದರಿದ ಕೃಷಿ ಚಟುವಟಿಕೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಶಿರಹಟ್ಟಿ ತಾಲೂಕಿನಾದ್ಯಂತ ವಾಡಿಕೆಗಿಂತ ಹೆಚ್ಚಿನ ಮಳೆಯಾಗಿದ್ದು, ಈ ಬಾರಿ ಮುಂಗಾರು ಉತ್ತಮವಾಗಿರುವ ಲಕ್ಷಣಗಳು ಕಾಣುತ್ತಿರುವುದರಿಂದ ರೈತರು ಕೃಷಿ ಚಟುವಟಿಕೆಯನ್ನು ಚುರುಕುಗೊಳಿಸಿದ್ದಾರೆ. ರೈತರು ಕಳೆದೆರಡು ವರ್ಷಗಳಿಂದ ಬರಗಾಲ ಮತ್ತು ಅತಿವೃಷ್ಟಿಗೆ ಸಿಲುಕಿ ಕಂಗಾಲಾಗಿದ್ದು, ಅಶ್ವಿನಿ, ಭರಣಿ ಮತ್ತು ಕೃತ್ತಿಕಾ ಮಳೆ ಈ ಬಾರಿ ಉತ್ತಮವಾಗಿ ಸುರಿದು ರೈತರ ಮೊಗದಲ್ಲಿ ಹರ್ಷ ತಂದಿದೆ.

ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕಿನಲ್ಲಿ ಒಟ್ಟಾರೆ 94.913 ಭೌಗೋಳಿಕ ಕ್ಷೇತ್ರವಿದ್ದು, ಇದರಲ್ಲಿ 12.943 ಅರಣ್ಯ, 5.997 ಹೆಕ್ಟೇರ್ ಸಾಗುವಳಿ ಅಲ್ಲದ (ಬಂಜರು ಪ್ರದೇಶ) ಹಾಗೂ



74,475 ಹೆಕ್ಟೇರ್ ಸಾಗುವಳಿ ಕ್ಷೇತ್ರವಿದೆ. 60 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಪ್ರಮುಖ ವಾಣಿಜ್ಯ ಬೆಳೆಗಳನ್ನು ಬೆಳೆಯಲಾಗುತ್ತಿದೆ. ಕೃಷಿ ಇಲಾಖೆಯ ಅಂಕಿ-ಅಂಶದ ಪ್ರಕಾರ, ಮುಂಗಾರು ಹಂಗಾಮಿನಲ್ಲಿ ಶಿರಹಟ್ಟಿ ತಾಲೂಕಿನಲ್ಲಿ ಶೇಂಗಾ 3.350 ಹೆಕ್ಟೇರ್, ಹೆಸರು 3.200 ಹೆಕ್ಟೇರ್, ಗೋವಿನಜೋಳ 27.146 ಹೆಕ್ಟೇರ್, ಸೂರ್ಯಕಾಂತಿ 45 ಹೆಕ್ಟೇರ್, ತೊಗರಿ 450 ಹೆಕ್ಟೇರ್, ಅಲಸಂದಿ 55 ಹೆಕ್ಟೇರ್, ಬತ್ತ 460 ಹೆಕ್ಟೇರ್, ಹತ್ತಿ 575 ಹೆಕ್ಟೇರ್, ಕಬ್ಬು 500 ಹೆಕ್ಟೇರ್, ಹೈಬ್ರೀಡ್ ಜೋಳ 125 ಹೆಕ್ಟೇರ್ ಸೇರಿದಂತೆ ಒಟ್ಟು 36.411 ಹೆಕ್ಟೇರ್ ಮುಂಗಾರು ಬಿತ್ತನೆ ಗುರಿ ಹೊಂದಲಾಗಿದೆ.

ತಾಲೂಕಿನ ಬಹುತೇಕ ಗ್ರಾಮಗಳಲ್ಲಿ ರೈತರು ಕೃಷಿ ಭೂಮಿಯನ್ನು ಹದಗೊಳಿಸುವ ಕಾರ್ಯ ಭರದಿಂದ ನಡೆಸಿದ್ದು, ಕೆಲ ರೈತರು ಸಾವಯವ ಗೊಬ್ಬರವನ್ನು ಭೂಮಿಗೆ ಸೇರಿಸುವ ಕೆಲಸದಲ್ಲಿ ನಿರತರಾಗಿದ್ದಾರೆ. ಈ ಎಲ್ಲ ಕಾರ್ಯ ಸಧ್ಯ ಮುಗಿಯುತ್ತಿದ್ದು, ಭರಣಿ ಮಳೆಗೆ ಬಹುತೇಕ ಬಿತ್ತನೆ ಕಾರ್ಯ ಆರಂಭಗೊಳ್ಳಲಿದೆ. ತಾಲೂಕಿನ ಕಡಕೋಳ, ಹೊಸಳ್ಳಿ, ಮಾಚೇನಹಳ್ಳಿ, ಮಜ್ಜೂರ, ವರವಿ, ತೆಗ್ಗಿನ ಭಾವನೂರ, ಹಡಗಲಿ, ಬನ್ನಿಕೊಪ್ಪ, ಬೆಳ್ಳಟ್ಟಿ, ಮಾಗಡಿ, ಹೊಳಲಾಪೂರ, ಪರಸಾಪೂರ, ಛಬ್ಬಿ, ರಣತೂರ, ನಾಗರಮಡುವು ಗ್ರಾಮಗಳಲ್ಲಿ ಮಳೆ ಉತ್ತಮವಾಗಿರುವುದರಿಂದ ಈ ಭಾಗದಲ್ಲಿ ರೈತರು ಬಿತ್ತನೆಗೆ ಸಿದ್ಧತೆ ನಡೆಸಿದ್ದು, ಬೀಜ, ಗೊಬ್ಬರ ಸಂಗ್ರಹಿಸಲು ಮುಂದಾಗಿದ್ದಾರೆ.

ಈ ಬಾರಿ ತಾಲೂಕಿನಾದ್ಯಂತ ಮುಂಗಾರು ಪೂರ್ವದಿಂದಲೇ ಉತ್ತಮ ಮಳೆಯಾಗುತ್ತಿದ್ದು, ಸಹಜವಾಗಿ ಭೂಮಿಯಲ್ಲಿ ತೇವಾಂಶ ಹೆಚ್ಚಿಗೆ ಇದೆ. ಈ ಸಂದರ್ಭದಲ್ಲಿ ರೈತರು ಸಾಲ-ಸೋಲ ಮಾಡಿ ಬಿತ್ತನೆಗೆ ಬೀಜ-ಗೊಬ್ಬರಗಳನ್ನು ಸಂಗ್ರಹಿಸುತ್ತಿದ್ದಾರೆ. ಈ ಹಂತದಲ್ಲಿ ರೈತರಿಗೆ ಬಿತ್ತನೆ ಪೂರ್ವದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಇಲಾಖೆ ವತಿಯಿಂದ ಹೆಚ್ಚಿನ ಜಾಗೃತಿ ಮೂಡಿಸುವುದು ಅವಶ್ಯವಿದೆ.

> ಈ ಬಾರಿ ವಾಡಿಕೆಗಿಂತ ಹೆಚ್ಚಿಗೆ ಮಳೆಯಾಗಿದ್ದು, ರೈತರು ಬಿತ್ತನೆ ಪೂರ್ವದಲ್ಲಿ ಮಣ್ಣಿನ ತೇವಾಂಶ ನೋಡಿಕೊಳ್ಳಬೇಕು. ಪ್ರಮಾಣೀಕೃತ ಬೀಜಗಳನ್ನು ರೈತ ಸಂಪರ್ಕ ಕೇಂದ್ರಗಳಲ್ಲಿ ಪಡೆದುಕೊಂಡು ಅಗತ್ಯ ಬೀಜೋಪಚಾರ, ಅಣುಜೀವಿ ಗೊಬ್ಬರ ಲೇಪನ ಮಾಡಬೇಕು. ಡಿಎಪಿ ಗೊಬ್ಬರ ಪರ್ಯಾಯವಾಗಿ ಲಭ್ಯವಿರುವ ಸಂಯುಕ್ತ ಗೊಬ್ಬರಗಳನ್ನು (ಕಾಂಪ್ಲೆಕ್ಸ್) ಉಪಯೋಗಿಸಬೇಕು. ರೈತ ಸಂಪರ್ಕ ಕೇಂದ್ರಗಳಲ್ಲಿ ಹೆಸರು, ತೊಗರಿ, ಮೆಕ್ಕೆಜೋಳ ಬೀಜಗಳು ಸಂಗ್ರಹವಿದೆ. ಸಣ್ಣ ಅತೀಸಣ್ಣ ರೈತರಿಗೆ ಶೇ.50ರ ಸಹಾಯಧನ ಅಡಿ ಹೆಸರು, ಗೋವಿನಜೋಳ ಬೀಜಗಳನ್ನು ನೀಡಲಾಗುತ್ತಿದೆ.
>
> – ರೇವಣೆಪ್ಪ ಮನಗೂಳಿ.
> ಸಹಾಯಕ ಕೃಷಿ ನಿರ್ದೇಶಕರು.

# ಅಲಗಿಲವಾಡದಲ್ಲಿ ಶಾಲಾ ಪ್ರಾರಂಭೋತ್ಸವ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇಲ್ಲಿನ ಅಲಗಿಲವಾಡ ಶಾಲೆಯಲ್ಲಿ ಪ್ರಸಕ್ತ ಸಾಲಿನ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು. ಗದಗ ಜಿಲ್ಲೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಅವರ ಆದೇಶದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎಚ್.ನಾಣಕೀ ನಾಯಕರ ನಿರ್ದೇಶನದಂತೆ ಹೆಬ್ಬಾಳ ಕ್ಲಸ್ಟರ್ ಸಿಆರ್‌ಪಿ ತಿರಕಪ್ಪ ಪೂಜಾರ ಇವರ ಮಾರ್ಗದರ್ಶನದಲ್ಲಿ ಶಾಲೆಯನ್ನು ತಳಿರು-ತೋರಣಗಳಿಂದ ಸಿಂಗರಿಸಿ ಮಕ್ಕಳಿಗೆ ಗುಲಾಬಿ ಹೂ ನೀಡಿ ಆರತಿ ಬೆಳಗಿ ಸ್ವಾಗತಿಸಲಾಯಿತು.

ಪ್ರಧಾನ ಗುರುಗಳಾದ ಹಾಲೇಶ ಎಸ್.ಜಕ್ಕಲಿ ಮಾತನಾಡಿ, ಶಾಲೆಯಲ್ಲಿ ಗುಣಾತ್ಮಕ ಶಿಕ್ಷಣ ನೀಡಿ ಮಕ್ಕಳನ್ನು ಪ್ರಜ್ಞಾವಂತ ಪ್ರಜೆಗಳನ್ನಾಗಿಸಿ, ಅವರ ಭವಿಷ್ಯ ರೂಪಿಸುವ ಗುರುತರ ಜವಾಬ್ದಾರಿ ನಮ್ಮ ಮೇಲಿದೆ. ಶಾಲೆಯಲ್ಲಿ ಮಕ್ಕಳಿಗೆ ಉಚಿತ ಪಠ್ಯಪುಸ್ತಕ,



ಸಮವಸ್ತ್ರ, ಮಧ್ಯಾಹ್ನ ಬಿಸಿಊಟ, ಕ್ಷೀರಭಾಗ್ಯ ಇತ್ಯಾದಿ ಸೌಕರ್ಯಗಳನ್ನು ಇಲಾಖೆ ನೀಡುತ್ತಿದ್ದು, ನಿಮ್ಮ ಮಕ್ಕಳನ್ನು ಸರಕಾರಿ ಶಾಲೆಗೆ ಸೇರಿಸಬೇಕೆಂದು ಪಾಲಕರಲ್ಲಿ ಮನವಿ ಮಾಡಿದರು.

ಇದೆ ಸಂದರ್ಭದಲ್ಲಿ ಮಕ್ಕಳಿಗೆ ಉಚಿತ ಪಠ್ಯಪುಸ್ತಕಗಳನ್ನು ವಿತರಿಸಲಾಯಿತು. ಬಿಸಿಯೂಟದೊಂದಿಗೆ ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಎಚ್.ಎಸ್. ರಾಮನಗೌಡ್ರ ನಿರ್ದೇಶನದಂತೆ ಮಕ್ಕಳಿಗೆ ಸಿಹಿ ಭೋಜನದ ವ್ಯವಸ್ಥೆ ಮಾಡಲಾಗಿತ್ತು. ಈ ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಮರಿಯಪ್ಪ ದೊಡ್ಡಮನಿ, ಶಿಕ್ಷಕರಾದ ನೇಮೇಶ ಯರಗುಪ್ಪಿ, ಪಾಲಕರಾದ ಫಕ್ಕೀರೇಶ ಪೂಜಾರ, ಇಮಾಮಸಾಬ ನದಾಫ್, ಮೈಲಪ್ಪ ಹರಿಜನ, ಹನುಮಪ್ಪ ಬೆಳ್ಳಟ್ಟಿ, ಮಾಬುಸಾಬ ನದಾಫ್, ಅಂಗನವಾಡಿ ಗುರುಮಾತೆ ಮಹಾದೇವಿ ಹಸವಿಮಠ, ಅಡುಗೆ ಸಿಬ್ಬಂದಿಗಳಾದ ಹುಸೇನಬಿ ನದಾಫ್ ಮುಂತಾದವರಿದ್ದರು.

ಹಳೇ ತೇಗೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅದ್ದೂರಿ ಶಾಲಾ ಪ್ರಾರಂಭೋತ್ಸವ

# ಗಮನ ಸೆಳೆದ 'ಮಕ್ಕಳ ತೇರು'

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ನಿಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ, ಅವರ ಶಾಶ್ವತ ಸಂತೋಷಕ್ಕೆ ಕಾರಣರಾಗಿ ಎಂದು ಕೇತ್ರ ಸಮನ್ವಯಾಧಿಕಾರಿ ಕುಮಾರ ಕೆ.ಎಫ್. ಪಾಲಕರಿಗೆ ಕರೆ ನೀಡಿದರು.

ಧಾರವಾಡ ತಾಲೂಕಿನ ಹಳೇ ತೇಗೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 2025-26ನೇ ಸಾಲಿನ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅಥಿತಿಯಾಗಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು.

'ಮಕ್ಕಳ ತೇರು' ಶಿಕ್ಷಣವು ಮಗುವಿನಲ್ಲಿ ಸುಪ್ತವಾಗಿರುವ ಪ್ರತಿಭೆಗಳನ್ನು ಹೊರಗೆಡುವುತ್ತದೆ. ಅದು ಮಗುವಿನ ದೈಹಿಕ, ಮಾನಸಿಕ ಹಾಗೂ ಬೌದ್ಧಿಕ ಸಾಮರ್ಥ್ಯಗಳನ್ನು ಅಭಿವೃದ್ಧಿಗೊಳಿಸುತ್ತದೆ. ಶಿಕ್ಷಣದಿಂದ ಶಿಸ್ತು, ಸಂಯಮ, ಸಹಕಾರ, ಸ್ವಾವಲಂಬನೆ, ಗೌರವ ಪಡೆಯುವಂತಾಗುತ್ತದೆ. ಮಕ್ಕಳೊಂದಿಗೆ ಭಾವನಾತ್ಮಕ ಗುಣಗಳು ಬೆಳೆಯುತ್ತವೆ. ಶಿಕ್ಷಣದಿಂದ ಆರೋಗ್ಯ ವೃದ್ಧಿಸುತ್ತದೆ. ಮಕ್ಕಳಿಗೆ ಟ್ರ್ಯಾಕ್ಟರ್ ಎಂಬ ತೇರಿನ ಮೂಲಕ ಕರೆದುಕೊಂಡು ಬಂದಿರುವುದು ಸಂತಸದಾಯಕವಾಗಿದೆ ಎಂದರು.

ಬಿಆರ್‌ಪಿ ರಾಘವೇಂದ್ರ ಬಡಿಗೇರ ಮಾತನಾಡುತ್ತಾ, ಶಾಲೆ ಆರಂಭವಾಗಿದೆ-ಎಲ್ಲರೂ ಶಾಲೆಗೆ ಬನ್ನಿರಿ, ನಿಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಿ ಎಂದು ಶಾಲಾ ಶಿಕ್ಷಣ ಇಲಾಖೆಯ ಪರವಾಗಿ ವಿನಂತಿಸಿದರು. ಗ್ರಾಮ ಪಂಚಾಯಿತಿ ಸದಸ್ಯರಾದ ಮಾರುತಿ ಬಂಡಿವಡ್ಡರ, ಮಂಜುಳಾ ಜೋಗಿ, ಸಿದ್ಲಿಂಗಮ್ಮ ಗುದಾದರಿ ಒಂದನೇ ತರಗತಿ ಮಕ್ಕಳಿಗೆ ಹೂ ಹಾಗೂ ಕಿರೀಟ ತೊಡಿಸಿ, ಸ್ವಾಗತಿಸಿದರು. ಮಕ್ಕಳಿಗೆ ಪಠ್ಯಪುಸ್ತಕ, ಸಮವಸ್ತ್ರ ಇತರೆ ಸೌಲಭ್ಯಗಳನ್ನು ಸಾಂಕೇತಿಕವಾಗಿ ವಿತರಿಸಿದರು. ದಾಖಲಾದ ಮಕ್ಕಳನ್ನು ಬಲೂನು, ಬಣ್ಣದ ಕಾಗದಗಳಿಂದ ಅಲಂಕರಿಸಿದ ಗಾಡಿಯಲ್ಲಿ ವಾದ್ಯಮೇಳದೊಂದಿಗೆ ಶಾಲೆಗೆ ಕರೆತರಲಾಯಿತು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಸದಸ್ಯರಾದ ಮಾರುತಿ ಬಂಡಿವಡ್ಡರ, ಮಂಜುಳಾ ಜೋಗಿ, ಸಿದ್ಲಿಂಗಮ್ಮ ಗುದಾದರಿ, ಬಿಆರ್‌ಪಿ ರಾಘವೇಂದ್ರ ಬಡಿಗೇರ, ಸಿಆರ್‌ಪಿ ವಿ.ಎಮ್. ಮಡಿವಾಳರ, ಎಸ್‌ಡಿಎಂಸಿ ಅಧ್ಯಕ್ಷ ಭೀಮಪ್ಪ ನವಲೂರ, ಕಲ್ಲಪ್ಪ ಕಂಬಾರ, ಭೀಮಪ್ಪ ಹಾಳೇಗೌಡ್ರ, ಮುಖ್ಯ ಗುರುಗಳಾದ ಡಿ.ಜೆ. ಪತ್ತಾರ, ಎಸ್.ವಿ. ಗೊಂಬಿ, ಎ.ಎನ್. ಸಲಗಾವ್ಕರ, ಕೆ.ಬಿ. ಪತ್ತಾರ, ರೇಣುಕಾ ಹಾರುಗೊಪ್ಪ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



> 'ಮಕ್ಕಳ ತೇರು' ಟ್ರ್ಯಾಕ್ಟರ್ ಸುತ್ತಮುತ್ತಲೂ ಕಳೆದ ವರ್ಷ ಕೈಗೊಂಡ ಶೈಕ್ಷಣಿಕ ಕಾರ್ಯಕ್ರಮಗಳ ಕೆಲವು ಭಾವಚಿತ್ರಗಳನ್ನು ಅನಾವರಣ ಮಾಡಲಾಗಿತ್ತು. ತೆಂಗಿನ ಗರಿ, ತಳಿರು-ತೋರಣ, ಹೂವುಗಳಿಂದ ಅಲಂಕಾರ ಮಾಡಿ ಮೆರವಣಿಗೆಗೆ ಸಿದ್ಧಪಡಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಅತ್ಯಂತ ಅದ್ದೂರಿಯಿಂದ ಮಕ್ಕಳನ್ನು ಕರೆದುಕೊಂಡು ಮೆರವಣಿಗೆ ಮೂಲಕ, ಪಾಲಕರು ತಮ್ಮ ಮಕ್ಕಳನ್ನು ಶಾಲೆಗೆ ಕಳಿಸಬೇಕೆಂದು ಘೋಷಣೆಗಳನ್ನು ಕೂಗಿದರು.

# ಕಲಿಕೆಯಲ್ಲಿ ಆಸಕ್ತಿ ಮೂಡಿಸಿ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಕಲಿಕೆಯಲ್ಲಿ ಹಿಂದುಳಿದ ಮಕ್ಕಳ ಬಗ್ಗೆ ಹೆಚ್ಚು ಒತ್ತು ನೀಡಿ ಎಂದು ಹಳೆಯ ವಿದ್ಯಾರ್ಥಿಗಳ ಸಂಘದ ಗೌರವಾಧ್ಯಕ್ಷ ಎಚ್.ಎಂ. ಮಲ್ಲಿಕಾರ್ಜುನಸ್ವಾಮಿ ಶಿಕ್ಷಕರಿಗೆ ಸಲಹೆ ನೀಡಿದರು.

ಅವರು ಪಟ್ಟಣದ ಮೇಗಳಪೇಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಗುಲಾಬಿ ಹೂವು ನೀಡಿ, ಸಿಹಿ ವಿತರಿಸಿ ಸ್ವಾಗತಿಸಿ ಮಾತನಾಡಿದರು.

ಪೋಷಕರಿಗಿಂತ ಶಿಕ್ಷಕರಿಗೆ ಮಕ್ಕಳ ಮನಸ್ಥಿತಿ ಹೆಚ್ಚು ತಿಳಿದಿರುತ್ತದೆ. ಮಕ್ಕಳಿಗೆ ಆರಂಭದಿಂದಲೇ ಕಲಿಕೆಯಲ್ಲಿ ಆಸಕ್ತಿ ಮೂಡುವಂತೆ ಮಾಡಬೇಕು ಎಂದು ಹೇಳಿದರು.

ಮುಂಬರುವ ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣೆಯಾಗಲು ಶಿಕ್ಷಕರು ಶ್ರಮ ವಹಿಸಬೇಕು. ಮೇಗಳಪೇಟೆ ಸ.ಹಿ.ಪ್ರಾ ಶಾಲೆಗೆ ಮೂಲ ಸೌಕರ್ಯಗಳನ್ನು ಶಾಸಕರು ಒದಗಿಸಿದ್ದಾರೆ, ಉಳಿದ ಅಭಿವೃದ್ಧಿ ಕೆಲಸ ಸಹ ಮಾಡುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಉಪವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ ಮಾತನಾಡಿ, ಸರ್ಕಾರಿ ಶಾಲೆಗಳಿಗೆ ಸರ್ಕಾರ ಅನೇಕ ಸೌಲಭ್ಯಗಳನ್ನು ನೀಡುತ್ತಿದೆ. ಅಂತಹ ಎಲ್ಲಾ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉಜ್ವಲ ಭವಿಷ್ಯವನ್ನು ರೂಪಿಸಿಕೊಳ್ಳಿ ಎಂದು ಮಕ್ಕಳಿಗೆ ತಿಳಿಸಿದರು.

# ರೈತ ಆತ್ಮಹತ್ಯೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ತಾಲೂಕಿನ ಯಳವತ್ತಿ ಗ್ರಾಮದ ರೈತ ಚನ್ನಬಸಯ್ಯ ವಿರುಪಾಕ್ಷಯ್ಯ ಚಿಕ್ಕಮಠ (40) ಸಾಲಬಾಧೆ ತಾಳಲಾರದೆ ಮೇ.29ರಂದು ಯಳವತ್ತಿ ಗ್ರಾಮದ ಈರನಗೌಡ ಪಾಟೀಲ ಇವರ ಹೊಲದಲ್ಲಿ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ.

ಮೃತ ಚನ್ನಬಸಯ್ಯ ಅವರು ಯಳವತ್ತಿ ಗ್ರಾಮದ ಕೆವಿಜಿ ಬ್ಯಾಂಕ್‌ನಲ್ಲಿ 1 ಲಕ್ಷ 81 ಸಾವಿರ, ಧರ್ಮಸ್ಥಳ ಸಂಘದಲ್ಲಿ ಕೃಷಿ ಕೆಲಸಕ್ಕೆಂದು ಒಂದು ಲಕ್ಷ ಹಾಗೂ ಯಳವತ್ತಿ ಗ್ರಾಮ ಶಕ್ತಿಯಲ್ಲಿ 25 ಸಾವಿರ ರೂ ಸೇರಿದಂತೆ ಮೂರು ಲಕ್ಷಕ್ಕೂ ಅಧಿಕ ಸಾಲವನ್ನು ಹಾಗೂ ಕೈಗಡ ಸಾಲವನ್ನು ಮಾಡಿದ್ದು, ಸಾಲ ತೀರಿಸುವದು ಹೇಗೆ ಎನ್ನುವ ಚಿಂತೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ಕುರಿತಂತೆ ಮೃತನ ಪತ್ನಿ ಲಲಿತಾ ಚಿಕ್ಕಮಠ ಅವರು ಪಟ್ಟಣದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ.



ಲಕ್ಷ್ಮೇಶ್ವರ ತಾಲೂಕಿನ ಮುಕ್ತಿನಗರದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರು ಹಾಗೂ ಎಸ್‌ಡಿಎಂಸಿಯವರು ಸಿಹಿ, ಪಠ್ಯಪುಸ್ತಕಗಳನ್ನು ನೀಡುವ ಮೂಲಕ ವಿದ್ಯಾರ್ಥಿಗಳನ್ನು ಸ್ವಾಗತಿಸಿದರು. ಎಸ್‌ಡಿಎಂಸಿ ಅಧ್ಯಕ್ಷೆ ನಗೀನಾ ಲಾಡಸಾಬನವರ, ಉಪಾಧ್ಯಕ್ಷೆ ಕವಿತಾ ಚಿಂಚಲಿ, ಪ್ರಧಾನ ಗುರುಮಾತೆ ಅನಿತಾ ನಿಂಗಮ್ಮನವರ, ಸದಸ್ಯರಾದ ದೀಪಾ ಬನ್ನಿಕೊಪ್ಪ, ರೋಷನ್, ಲಕ್ಷ್ಮೀ ಕರಮುಡಿ, ದೀಪಾ ಹುಲಿಕಟ್ಟಿ, ಕರಾಸನೌ ಸಂಘದ ನಿರ್ದೇಶಕ ಬಿ.ಎಮ್. ಯರಗುಪ್ಪಿ ಹಾಜರಿದ್ದರು.

# ಸ್ಟಾರ್ಟ್‌ಅಪ್‌ಗಳಿಗೆ ಸಹಾಯಧನ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೃಷಿಕ್-ನವೋದ್ಯಮ ಪೋಷಣ ಕೇಂದ್ರ ಆರ್‌ಕೆವಿವೈ-ಇನ್ನೋವೇಷನ್ ಮತ್ತು ಕೃಷಿ-ಉದ್ಯಮಶೀಲತೆ ಕಾರ್ಯಕ್ರಮದ ಅಡಿಯಲ್ಲಿ 10ನೇ ಹಂತದ ಸ್ಟಾರ್ಟ್‌ಅಪ್‌ಗಳಿಗೆ ಒಪ್ಪಂದದ ಜ್ಞಾಪಕ ಪತ್ರ (ಎಂಒಎ) ಮತ್ತು ಸಹಾಯ ಧನ ವಿತರಣೆ ಸಮಾರಂಭವು ಧಾರವಾಡದ ಕೃಷಿ ವಿಶ್ವವಿದ್ಯಾಲಯದಲ್ಲಿ ನಡೆಯಿತು.

ಈ ಸಂದರ್ಭದಲ್ಲಿ ವಿದ್ಯಾರ್ಥಿ ಹಂತದ ನಾಲ್ಕು ನವೋದ್ಯಮಿಗಳಿಗೆ (ರೂ.9.75 ಲಕ್ಷ), ಎಂಟು ಪ್ರಿಸೀಡ್ ಹಂತದ ನವೋದ್ಯಮಿಗಳಿಗೆ (ರೂ.27 ಲಕ್ಷ) ಮತ್ತು ಮೂರು ಸೀಡ್ ಹಂತದ ನವೋದ್ಯಮಿಗಳಿಗೆ (ರೂ. 37.50 ಲಕ್ಷ) ಮೊದಲನೆ ಕಂತಿನ ಸಹಾಯ ಧನ ವಿತರಿಸಲಾಯಿತು.

ಸಾಂಕೇತಿಕವಾಗಿ ಚೆಕ್ ವಿತರಣೆ ಮಾಡಿ ಮಾತನಾಡಿದ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ.ಎಲ್. ಪಾಟೀಲ, ಸ್ಟಾರ್ಟ್‌ಅಪ್‌ಗಳಿಂದ ಕೃಷಿ ತಂತ್ರಜ್ಞಾನ ಅಭಿವೃದ್ಧಿಪಡಿಸಲಾಗುತ್ತಿದ್ದು, ಇದಕ್ಕೆ ತಜ್ಞರನ್ನು, ವಿಜ್ಞಾನಿಗಳನ್ನು ಮಾರ್ಗದರ್ಶಕರಾಗಿ ನೇಮಿಸಲಾಗಿದೆ. ಈವರೆಗೆ 111 ಸ್ಟಾರ್ಟ್‌ಅಪ್‌ಗಳಿಗೆ ಅನುದಾನ ನೀಡಲಾಗಿದ್ದು, ಒಟ್ಟು 1630.46 ಲಕ್ಷ ಆದಾಯ, ಸಂಪನ್ಮೂಲ 957 ಉದ್ಯೋಗ ಸೃಷ್ಟಿ ಮಾಡಲಾಗಿದೆ. ಅಲ್ಲದೆ 1.2 ಲಕ್ಷ ರೈತರಿಗೆ ತಂತ್ರಜ್ಞಾನ ಪ್ರಸಾರ ಮಾಡಲಾಗಿದೆ. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ರಫ್ತಾರ್ ಯೋಜನೆ ಪ್ರತಿ ವರ್ಷ ಎರಡು ಬ್ಯಾಚ್‌ಗಳಲ್ಲಿ ಸ್ಟಾರ್ಟ್‌ಅಪ್‌ಗಳನ್ನು ಆಯ್ಕೆ ಮಾಡಲಾಗುತ್ತಿದೆ ಎಂದರು.

ಕೃಷಿಕ್-ನವೋದ್ಯಮ ಪೋಷಣ ಕೇಂದ್ರದ ಪ್ರಧಾನ ಸಂಶೋಧಕರು ಹಾಗೂ ಕಾರ್ಯನಿರ್ವಹಣಾ ಅಧಿಕಾರಿಗಳಾದ ಡಾ. ಎಸ್.ಎಸ್. ಡೊಳ್ಳಿ ಸ್ವಾಗತಿಸಿ ಸ್ಟಾರ್ಟ್‌ಅಪ್‌ಗಳ ಬದ್ಧತೆಗಳ ಬಗ್ಗೆ ವಿವರಿಸಿದರು. ಸಹಾಯಕ ಪ್ರಧಾನ ಸಂಶೋಧಕರಾದ ಬಸವರಾಜ ಜಿ ವಂದಿಸಿದರು.

ಕೃಷಿ ವಿಶ್ವವಿದ್ಯಾಲಯದ ಕೃಷಿ ನವೋದ್ಯಮ ಪೋಷಣ ಕೇಂದ್ರದ ವತಿಯಿಂದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ 12ನೇ ಬ್ಯಾಚ್‌ಗೆ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿದಾರರು ಹೆಚ್ಚಿನ ವಿವರಗಳಿಗಾಗಿ www.krishik-abiuasd.org ವೆಬ್‌ಸೈಟ್‌ಗೆ ಭೇಟಿ ನೀಡಬಹುದಾಗಿದೆ.

# ಕನ್ನಡ ವಿಭಾಗದ ವಿದ್ಯಾರ್ಥಿಗಳಿಂದ ಕ್ಷೇತ್ರ ಭೇಟಿ



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಜಗದ್ಗುರು ತೆ-ೂಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದ ಪ್ರಾ ಎಂ.ಎಂ. ಬುರಡಿಯವರ ಸಹಕಾರದಿಂದ ಕನ್ನಡ ವಿಭಾಗದ ವಿದ್ಯಾರ್ಥಿಗಳಿಂದ ಸಂಶೋಧನಾ ಕಾರ್ಯ ವೀಕ್ಷಣೆಗಾಗಿ ಐತಿಹಾಸಿಕ ಸ್ಥಳ ಲಕ್ಕುಂಡಿ ಗ್ರಾಮದ ಜೈನ ಬಸದಿ ಬ್ರಹ್ಮ ಜಿನಾಲಯ, ಹಾಲಗುಂಡಿ ಬಸವೇಶ್ವರ ದೇವಾಲಯ, ಕಾಶಿ ವಿಶ್ವೇಶ್ವರ, ಸೂರ್ಯ ದೇವಾಲಯ, ನಾನೇಶ್ವರ ದೇವಾಲಯ ಹಾಗೂ ಮಣಿಕೇಶ್ವರ ದೇವಾಲಯಗಳಿಗೆ ಭೇಟಿ ನೀಡಿ ಶಾಸನಗಳು, ಲಿಪಿಗಳು ಹಾಗೂ ಆಕರ ಸಾಮಗ್ರಿಗಳ ವೀಕ್ಷಣೆ ಮಾಡಿ ಐತಿಹಾಸಿಕ ವಿಷಯಗಳ ಕುರಿತು ಮಾರ್ಗದರ್ಶಕರಾದ ಪಾಪಳೆ ಅವರಿಂದ ಮಾಹಿತಿ ಸಂಗ್ರಹಿಸಿದರು. ಈ ಸಂದರ್ಭದಲ್ಲಿ ಪ್ರೊ. ಕೆ.ಪಿ. ಹಂಡಿಯವರ, ಪ್ರೊ. ಕೆ.ಎಸ್. ಅಜನಾಳ, ಪ್ರೊ. ಕೆ.ಎಸ್. ಮಲ್ಲಾಪೂರ, ಲಕ್ಕುಂಡಿ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷರಾದ ಶ್ರೇಯಾ ಕಟ್ಟಿಗಾರ, ಸದಸ್ಯರಾದ ಚಂದ್ರು ಕಟ್ಟಿಗಾರ, ಜವಳಿ ಉತ್ಪಾದಕರಾದ ವಿ.ಪಿ. ಅಜನಾಳ ಹಾಗೂ ಮಹಾವಿದ್ಯಾಲಯದ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಹೆತ್ತ ತಂದೆ-ತಾಯಿ, ಕಲಿಸಿದ ಗುರುಗಳನ್ನು ಎಂದಿಗೂ ಮರೆಯಬಾರದು ಎಂದು ಬಸವರಾಜ ಬಡ್ನಿ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆಯ (ಆರ್.ಎಂ.ಎಸ್.ಎ) ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸರಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವುದರ ಜೊತೆಯಲ್ಲಿ ಸರಕಾರದಿಂದ ಹಲವು ಸೌಲಭ್ಯಗಳು ಸಿಗುತ್ತವೆ. ತಂದೆ-ತಾಯಿಗಳು ಹಾಗೂ ಗುರುಗಳು ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಹಗಲಿರುಳು ಶ್ರಮಿಸುತ್ತಾರೆ. ಮಕ್ಕಳು ಸತತವಾಗಿ ಅಭ್ಯಾಸದಲ್ಲಿ ತೊಡಗಿಕೊಂಡು ಗ್ರಾಮಕ್ಕೆ, ಕಲಿತ ಶಾಲೆಗೆ ಕೀರ್ತಿ ತರಬೇಕು ಎಂದರು.



ರಾಜ್ಯ ಪ್ರಶಸ್ತಿ ವಿಜೇತ ಶಿಕ್ಷಕಿ ರತ್ನಾ ಬದಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಮಕ್ಕಳು ನಮಗೆ ದೇವರಿದ್ದಂತೆ. ಆ ದೇವರುಗಳ ಸೇವೆ ಮಾಡುವ ಗುರುಗಳಾಗುವ ಭಾಗ್ಯ ನಮಗೆಲ್ಲರಿಗೂ ದೊರೆತಿದೆ. ಇಂದು ಆಧುನಿಕ ತಂತ್ರಜ್ಞಾನ ಬೆಳೆದಂತೆ ಮಕ್ಕಳು ಕಲಿಕೆಯಲ್ಲಿ ಮುಂದಿದ್ದಾರೆ. ಸರಕಾರಿ ಶಾಲೆಗಳಿಗೆ ಮಕ್ಕಳನ್ನು ಕಳಿಸಿ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ಮಾಹಾದೇವಪ್ಪ ಮಾನೇಗಾರ, ಮಾಹಾಂತೇಶ ಕೆಂಚನಾಯ್ಕರ, ಶಾಲಾ ಪ್ರಧಾನ ಗುರು ಶರಣು ಪೂಜಾರ, ಎಲ್.ಡಿ. ರಾಠೋಡ, ನೂರಹ್ಮದ ನದಾಫ್, ವಿ.ಟಿ. ಅಂಗಡಿ, ಜಿ.ಆರ್. ಕುಂದರಗಿ. ಗೀತಾ ಪಾಟೀಲ್, ಬಸವರಾಜ ಗೌರಿಮನಿ, ಮಂಜುನಾಥ ಗುಲಗಂಜಿ ಇದ್ದರು.

# ರಾಣಾ ಪ್ರತಾಪಸಿಂಹರ ಜಯಂತ್ಯುತ್ಸವ ಮೆರವಣಿಗೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಗದಗ-ಬೆಟಗೇರಿಯ ರಜಪೂತ ಸಮಾಜದ ವತಿಯಿಂದ ರಾಷ್ಟ್ರವೀರ ಮಹಾರಾಣಾ ಪ್ರತಾಪಸಿಂಹರ 485ನೇ ಜಯಂತ್ಯುತ್ಸವದ ಅಂಗವಾಗಿ ಭವ್ಯ ಮೆರವಣಿಗೆ ಜರುಗಿತು. ಸಾಮಾಜಿಕ ಕಾರ್ಯಕರ್ತರಾದ ಮೋಹನಸಿಂಗ್ ಎಲ್.ಪಟಪಟೆ ಮೆರವಣಿಗೆಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಶಂಕರಸಿಂಗ್ ಮಳ್ಳದ, ಸೂರಜ್‌ಸಿಂಗ್ ಜಮಾದಾರ, ವಿರೇಂದ್ರಸಿಂಗ್ ರಜಪೂತ, ರವಿಸಿಂಗ್ ಬಾವರೆ, ಕಿರಣಸಿಂಗ್ ಬ್ಯಾಳಿ, ಪ್ರಮೋದಸಿಂಗ್ ರಜಪೂತ, ಆದರ್ಶಸಿಂಗ್ ಮಿಠಡೆ, ಅರವಿಂದಸಿಂಗ್ ಲದ್ದೀಗೇರಿ, ಲಕ್ಷ್ಮಣಸಿಂಗ್ ದಿಡ್ಡಿಮನಿ, ಗಣೇಶಸಿಂಗ್ ಧಡೇದ, ರಾಕೇಶಸಿಂಗ್ ಕಾಟೆವಾಲ, ಕಾರ್ತಿಕಸಿಂಗ್ ಮಿಠಡೆ, ಡಾ. ಜಯಪಾಲಸಿಂಗ್ ಸಮೂರೇಕರ, ಅರವಿಂದಸಿಂಗ್ ದೊಡ್ಡಮನಿ, ವಿಜಯಸಿಂಗ್ ದೊಡ್ಡಮನಿ, ರವಿಸಿಂಗ್ ಕಾಟೇವಾಲ ಹಾಗೂ ರಜಪೂತ ಸಮಾಜದ ಹಿರಿಯರು, ಸಮಸ್ತ ರಜಪೂತ ಬಾಂಧವರು, ರಜಪೂತ ಸಮಾಜದ ಎಲ್ಲ ಯುವಕರು, ಹಿತೈಷಿಗಳು ಪಾಲ್ಗೊಂಡಿದ್ದರು.

### ತಾಲೂಕು ಮಟ್ಟದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಬಸವರಾಜ ಹೊರಟ್ಟಿ

# ಶಿಕ್ಷಣ ಪ್ರತೀ ಮಗುವಿನ ಹಕ್ಕು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪೋಷಕರು ಆಂಗ್ಲ ಮಾಧ್ಯಮದ ವ್ಯಾಮೋಹ ಬಿಟ್ಟು ಮಾತೃಭಾಷೆಯ ಮೇಲೆ ಅಭಿಮಾನವಿಟ್ಟು ಸರ್ಕಾರಿ ಕನ್ನಡ ಮಾಧ್ಯಮ ಶಾಲೆಗಳಿಗೆ ತಮ್ಮ ಮಕ್ಕಳನ್ನು ದಾಖಲಿಸಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಅವರು ತಾಲೂಕಿನ ಅಡರಕಟ್ಟಿ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ತಾಲೂಕು ಮಟ್ಟದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣ ಪ್ರತೀ ಮಗುವಿನ ಹಕ್ಕಾಗಿದ್ದು, ಸರ್ಕಾರ ಮಕ್ಕಳ ಶಿಕ್ಷಣಕ್ಕಾಗಿ ಅನೇಕ ಸೌಲಭ್ಯಗಳನ್ನು ನೀಡುತ್ತದೆ. ಅವುಗಳನ್ನು ಸದ್ಬಳಕೆ ಮಾಡಿಕೊಂಡು, ಉತ್ತಮ ಶಿಕ್ಷಣ ಪಡೆದು ಸಮಾಜದಲ್ಲಿ ಗೌರವಯುತ ಜೀವನ ನಡೆಸುವಂತಾಗಬೇಕು. ಪಾಲಕರು ಕೇವಲ ಬಡತನವನ್ನೇ ನೆಪ ಮಾಡಿಕೊಂಡು ಮಕ್ಕಳನ್ನು



ಶಿಕ್ಷಣ ವಂಚಿತರನ್ನಾಗಿ ಮಾಡುವುದು ಅಕ್ಷಮ್ಯ ಅಪರಾಧ. ಆದ್ದರಿಂದ ಎಂತಹದ್ದೇ ಕಷ್ಟ-ನಷ್ಟಗಳಿರಲಿ ವಿದ್ಯೆಯೇ ಸಂಪತ್ತಾಗಿದ್ದು, ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಬೇಕು. ಇದು ಕೇವಲ ಸರಕಾರದ ಜವಾಬ್ದಾರಿ ಅಷ್ಟೇ ಆಗದೇ ಪಾಲಕರು, ಸಂಘ-ಸಂಸ್ಥೆಗಳು, ಸಾರ್ವಜನಿಕರು ಸ್ವಯಂ ಪ್ರೇರಣೆಯಿಂದ ಮುಂದೆ ಬಂದು ಶಾಲೆ ಬಿಟ್ಟ ಮತ್ತು ಹೊರಗುಳಿದ ಮಕ್ಕಳ ಬಗ್ಗೆ ಮಾಹಿತಿ ನೀಡಬೇಕು. ಮಕ್ಕಳು ಶಾಲೆ ತಪ್ಪಿಸದೇ ಶ್ರದ್ಧೆಯಿಂದ ಓದುವ ಮೂಲಕ ಉತ್ತಮ ನಾಗರಿಕರಾಗಿ ಹೊರಹೊಮ್ಮಬೇಕೆಂದು ಹೇಳಿದರು.

ಶಾಸಕ ಡಾ.ಚಂದ್ರು ಲಮಾಣಿ ಮಕ್ಕಳಿಗೆ ಸಮವಸ್ತ್ರ, ಪಠ್ಯಪುಸ್ತಕ ವಿತರಿಸಿ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಎಲ್ಲಾ ಸೌಲಭ್ಯಗಳು ದೊರೆಯುತ್ತವೆ. ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಿಸಬೇಕು ಎಂದರು.

ತಹಸೀಲ್ದಾರ ವಾಸುದೇವ ಸ್ವಾಮಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಗ್ರಾ.ಪಂ ಅಧ್ಯಕ್ಷೆ ಪ್ರೇಮಕ್ಕ ಮಾನಪ್ಪ ಲಮಾಣಿ, ಉಪನಿರ್ದೇಶಕ ಆರ್.ಎಸ್. ಬುರಡಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಣಕಿ ನಾಯಕ್ ಭಾಗವಹಿಸಿ ಮಕ್ಕಳಿಗೆ ಸಮವಸ್ತ್ರ, ಪಠ್ಯಪುಸ್ತಕಗಳನ್ನು ವಿತರಿಸಿದರು. ಎಸ್‌ಡಿಎಂಸಿ ಅಧ್ಯಕ್ಷೆ ಜಯಶ್ರೀ ವಿರೇಶ ಭಂಗಿ, ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪುರ, ಕಾರ್ಯದರ್ಶಿ ಚಂದ್ರಕಾಂತ ನೇಕಾರ, ನಿ.ದೈಹಿಕ ಶಿಕ್ಷಣಾಧಿಕಾರಿ ಎಂ.ಎಂ. ಹವಳದ, ಬಿಆರ್‌ಪಿ ಈಶ್ವರ ಮೆಡ್ಲೇರಿ, ಇಸಿಓ ಉಮೇಶ ಹುಚ್ಚಯ್ಯನಮಠ, ಗೀತಾ ಹಳ್ಯಾಳ ಮತ್ತು ಶಿಕ್ಷಕರು ಇದ್ದರು. ಸಿಆರ್‌ಪಿ ಸತೀಶ ಬೋಮಲೆ, ಉಮೇಶ ನೇಕಾರ, ಶಿವಾನಂದ ನಿರ್ವಹಿಸಿದರು. ಡಿ.ಡಿ. ಲಮಾಣಿ, ಪಿ.ಸಿ. ಕಾಳಶೆಟ್ಟಿ, ಸಾವಿತ್ರಿ ಉಮಚಗಿ ನಿರೂಪಿಸಿದರು.

ಎರಡು ತಿಂಗಳ ರಜೆ ಬಳಿಕ ಶಾಲೆಗಳು ವಿಶೇಷ ರೀತಿಯಲ್ಲಿ ಪ್ರಾರಂಭಗೊಂಡು ಶಾಲೆಯಲ್ಲಿ ಮತ್ತೆ ಮಕ್ಕಳ ಕಲರವ ಕೇಳಿ ಬಂದಿತು. ವಿಶೇಷ ಪ್ರಾರಂಭೋತ್ಸವಕ್ಕಾಗಿ ಶಾಲೆಗೆ ಬಣ್ಣ ಹಚ್ಚಿ, ತಳಿರು-ತೋರಣ, ಬಲೂನ್‌ಗಳಿಂದ ಸಿಂಗರಿಸಲಾಗಿತ್ತು. ಮೊದಲ ದಿನ ಸರಸ್ವತಿ ಮತ್ತು ವಿನಾಯಕ ಪೂಜಾ ಕಾರ್ಯ ಕೈಗೊಳ್ಳಲಾಯಿತು. ಬಣ್ಣ ಬಣ್ಣದ ಹೊಸ ಉಡುಗೆಯುಟ್ಟು ಬಂದಿದ್ದ ಮಕ್ಕಳಿಗೆ ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿ ಮತ್ತು ಶಿಕ್ಷಕರು ಹೂವು, ಸಿಹಿ, ಚಾಕಲೇಟ್ ನೀಡಿ ಸ್ವಾಗತಿಸಿದರು. ಮಕ್ಕಳಿಗೆ ಬಿಸಿಯೂಟದೊಂದಿಗೆ ಸಿಹಿಯನ್ನೂ ಬಡಿಸಲಾಯಿತು.

### ಜನೌಷಧಿ ಕೇಂದ್ರಗಳನ್ನು ಮುಚ್ಚುತ್ತಿರುವುದನ್ನು ಖಂಡಿಸಿ ಬಿಜೆಪಿ ಪ್ರತಿಭಟನೆ

# ಜನೌಷಧಿ ಕೇಂದ್ರಗಳು ಮುಂದುವರೆಯಲಿ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಆರ್ಥಿಕವಾಗಿ ಹಿಂದುಳಿದ ಹಾಗೂ ಬಡತನ ರೇಖೆಗಿಂತ ಕೆಳಗಿರುವ ಎಲ್ಲಾ ವರ್ಗದ ಜನತೆಗೆ ಅವರ ಅನಾರೋಗ್ಯದ ವೇಳೆಯಲ್ಲಿ ಅನುಕೂಲವಾಗಲು ಜನೌಷಧಿ ಯೋಜನೆಯನ್ನು ಮೋದಿಯವರು ಜಾರಿಗೆ ತಂದರು ಎಂದು ಬಿಜೆಪಿ ಹಿರಿಯ ಮುಖಂಡ ಬಾಗಳಿ ಕೊಟ್ರೇಶಪ್ಪ ತಿಳಿಸಿದರು.

ರಾಜ್ಯ ಸರ್ಕಾರವು ಜನೌಷಧಿ ಕೇಂದ್ರಗಳನ್ನು ಮುಚ್ಚುತ್ತಿರುವುದನ್ನು ಖಂಡಿಸಿ ಹರಪನಹಳ್ಳಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಮುಂಭಾಗದಲ್ಲಿ ತಾಲೂಕು ಬಿಜೆಪಿ ಮಂಡಲದ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಅವರು ಮಾತನಾಡಿದರು.

ಶೇ.20ರಿಂದ 70 ರಿಯಾಯಿತಿ ದರದಲ್ಲಿ ಜನೌಷಧಿ ಕೇಂದ್ರದಲ್ಲಿ ಬಡವರ್ಗದ ಜನತೆಗೆ ಔಷಧಿಗಳು ದೊರೆಯುತ್ತಿದ್ದು, ಅದರಿಂದ ಆರ್ಥಿಕವಾಗಿ ಹಿಂದುಳಿದ ಬಡಜನತೆಗೆ ಸಾಕಷ್ಟು ಅನುಕೂಲವಾಗುತ್ತಿದೆ.

ಈಗ ದಿನೇಶ್ ಗುಂಡೂರಾವ್ ಅವರು ಈ ಜನೌಷಧಿ ಕೇಂದ್ರಗಳನ್ನು ಮುಚ್ಚಿ, ಎಲ್ಲಾ ಔಷಧಿಗಳ ಮೇಲೆ ತೆರಿಗೆ ಹೆಚ್ಚಿಸಿ ಸುಳ್ಳು ಗ್ಯಾರಂಟಿಗಳ ಬೊಕ್ಕಸಕ್ಕೆ ಹಣ ಹೊಂದಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಖಾಸಗಿ ಔಷಧಾಲಯಗಳಲ್ಲಿ ಬಡವರಿಗೆ ವೈದ್ಯರು ನೀಡಿದ ಮಾತ್ರೆಗಳನ್ನು ಖರೀದಿಸಲು ಸಾಧ್ಯವಾಗದ ಕಾರಣ ಪ್ರಧಾನಮಂತ್ರಿಯವರು ದೇಶದ ಎಲ್ಲಾ ರಾಜ್ಯಗಳಲ್ಲಿ ಈ ಯೋಜನೆ ಜಾರಿಗೆ ತಂದು ಕೋಟ್ಯಾಂತರ ಬಡವರ ಜೀವವನ್ನು ಉಳಿಸುವ ಕೆಲಸವನ್ನು ಮಾಡಿದ್ದಾರೆ. ಆದರೆ ರಾಜ್ಯ ಸರ್ಕಾರವು ಇವುಗಳನ್ನು ಮುಚ್ಚಿಸುವ ಮೂಲಕ ಬಡವರ ಜೀವವನ್ನು ತೆಗೆಯುವ ಕಾರ್ಯಕ್ಕೆ ಕೈಹಾಕಿರುವುದು ಖಂಡನೀಯ ಎಂದರು. ಮಂಡಲ ಅಧ್ಯಕ್ಷ ಕೆ.ಲಕ್ಷ್ಮಣ ಮಾತನಾಡಿ, ಜನೌಷಧಿ ಕೇಂದ್ರ ಮುಚ್ಚುವುದರಿಂದ ಸಾಕಷ್ಟು ಬಡ ಜನರಿಗೆ ಅನಾನುಕೂಲ, ಆರ್ಥಿಕ ನಷ್ಟ ಉಂಟಾಗಲಿದೆ. ಈ ಯೋಜನೆಯನ್ನು ಮುಂದುವರಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ಎಸ್ಸಿ ಮೋರ್ಚಾ ಕಾರ್ಯದರ್ಶಿ ಲಿಂಬ್ಯಾನಾಯ್ಕ, ಮುಖಂಡರಾದ ಎಂ.ಪಿ. ನಾಯ್ಕ, ನಂಜನಗೌಡ, ಓಂಕಾರಗೌಡ, ಆರುಂಡಿ ನಾಗರಾಜ, ವೆಂಕಟೇಶ್ ನಾಯ್ಕ, ಉದಯ್ ಕುಮಾರ, ಕಣಿವಿಹಳ್ಳಿ ಮಂಜುನಾಥ, ಚನ್ನನಗೌಡ, ಮುದುಕವ್ವನವರ ಶಂಕರ್, ಮಂಜ್ಯನಾಯ್ಕ, ಮಹೇಶ್ ಜವಳಿ, ಕಡೆಮನಿ ಸಂಗಮೇಶ್, ಬಾಗಳಿ ಜಗದೀಶ, ಮಟ್ಟಿ ಮಲ್ಲಿಕಾರ್ಜುನ, ಭದ್ರಿ ನಾರಾಯಣ, ಬೂದಿ ನವೀನ, ಬಂಡ್ರಿ ರಾಜು, ಮುನೇಗೌಡ, ಸ್ವಪ್ನ, ರೇಖಮ್ಮ ಮುಂತಾದವರಿದ್ದರು.

# ಉದ್ಯೋಗ ಸಂದರ್ಶನ ಮಾರ್ಗದರ್ಶಿ ಕಾರ್ಯಾಗಾರ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಕಾಲೇಜಿನಲ್ಲಿ ವಿವಿಧ ಕಂಪನಿಗಳ ಉದ್ಯೋಗ ಸಂದರ್ಶನ ಮಾರ್ಗದರ್ಶಿ ಕಾರ್ಯಾಗಾರ ಏರ್ಪಡಿಸಲಾಗಿತ್ತು.

ಸಂಪನ್ಮೂಲ ವ್ಯಕ್ತಿಗಳಾದ ಗುರುರಾಜ ದುರುಗಣ್ಣವರ ಆಗಮಿಸಿ ಮಾತನಾಡಿ, ವಿವಿಧ ಕಂಪನಿಗಳಲ್ಲಿ ಉದ್ಯೋಗಗಳ ಜಾಹಿರಾತುಗಳನ್ನು ಪ್ರಮುಖ ಪತ್ರಿಕೆಯಲ್ಲಿ ಗಮನಿಸಿ, ಕಂಪನಿಗೆ ಭೇಟಿ ನೀಡಿದಾಗ ಸಂದರ್ಶನಕಾರರು ಯಾವ ರೀತಿಯ ಪ್ರಶ್ನಾವಳಿಗಳನ್ನು ಕೇಳಬಹುದು ಎಂಬ ವಿಚಾರವಾಗಿ ಸವಿಸ್ತಾರವಾಗಿ ವಿವರಿಸಿದರು.

ಪ್ರಾಚಾರ್ಯ ಬಿ.ಎಸ್. ಹೀರೆಮಠ ಮಾತನಾಡಿ, ಮಹಾವಿದ್ಯಾಲಯದಲ್ಲಿ ಕಲಿತ ವಿದ್ಯಾರ್ಥಿಗಳು ವಿವಿಧ ಕಂಪನಿಗಳಲ್ಲಿ ಈಗಾಗಲೇ ಉತ್ತಮ ಸ್ಥಾನಮಾನಗಳನ್ನು ಹೊಂದಿ ಭವಿಷ್ಯ ರೂಪಿಸಿಕೊಂಡಿದ್ದಾರೆ. ಸಂಪನ್ಮೂಲ ವ್ಯಕ್ತಿ ಗುರುರಾಜ ದುರುಗಣ್ಣವರು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ್ದಕ್ಕಾಗಿ ಸಂಸ್ಥೆಯ ಪರವಾಗಿ ಅವರಿಗೆ ಅಭಿನಂದನೆ ಸಲ್ಲಿಸಿದರಲ್ಲದೆ, ಅವರು ಹೇಳಿಕೊಟ್ಟ ಮಾರ್ಗಸೂಚಿಯನ್ನು ವಿದ್ಯಾರ್ಥಿಗಳು ಪಾಲಿಸಿರಿ ಎಂದರು.

ಸಭೆಯ ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ ವಹಿಸಿದ್ದರು. ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಸಂಸ್ಥೆಯ ನಿರ್ದೇಶಕರುಗಳಾದ ಸಂಜಯ ಕುಡತರಕರ, ಚೇತನ ಕುಡತರಕರ ಹಾಗೂ ಆಡಳಿತಾಧಿಕಾರಿಗಳಾದ ಕಿಶೋರ ಮುದಗಲ್ಲ, ಪ್ರೊ. ಸವಿತಾ ಪೂಜಾರ, ಪ್ರೊ. ಅಲ್ವೀನಾ ಡಿ, ಪ್ರೊ. ಚೈತ್ರಾ ಡಿ, ಪ್ರೊ. ಶಾಹೀದಾ ಶಿರಹಟ್ಟಿ ಸೇರಿದಂತೆ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ'ಕ್ಕೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ ಅಂಗವಾಗಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಐ.ಸಿ.ಎ.ಆರ್-ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರವು ಕರ್ನಾಟಕ ರಾಜ್ಯ ಕೃಷಿ ಇಲಾಖೆ ಹಾಗೂ ಇತರೆ ಅಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ ಮೇ 29ರಿಂದ ಜೂನ್ 12ರವರೆಗೆ ಗದಗ ಜಿಲ್ಲೆಯ ಎಲ್ಲ ತಾಲೂಕುಗಳ ವಿವಿಧ ಗ್ರಾಮಗಳಲ್ಲಿ ಕೃಷಿ ತರಬೇತಿ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಕರ್ನಾಟಕ ರಾಜ್ಯ ಕೃಷಿ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಂಡಿದೆ.




ಮೊದಲನೆಯ ದಿನ ಶಿಂಗಟರಾಯನಕೇರಿ ಗ್ರಾಮದಲ್ಲಿ ಜಾಥಾದೊಂದಿಗೆ ವಿಜೃಂಭಣೆಯಿಂದ ಅಭಿಯಾನ ಪ್ರಾರಂಭವಾಯಿತು. ರೋಣ ತಾಲೂಕಿನ ನರೇಗಲ್ಲ, ಚಿಕ್ಕಮಣ್ಣೂರು, ಸವಡಿ ಮತ್ತು ನಿಡಗುಂದಿಕೊಪ್ಪ ಗ್ರಾಮಗಳಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಆಯೋಜಿಸಲಾಗಿತ್ತು. ಐ.ಸಿ.ಎ.ಆರ್-ಗೋಡಂಬಿ ಸಂಶೋಧನಾ ನಿರ್ದೇಶನಾಲಯದ ವಿಜ್ಞಾನಿಗಳು, ಕರ್ನಾಟಕ ಸರಕಾರದ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರು, ಕೃಷಿ ಅಧಿಕಾರಿಗಳು, ಆತ್ಮಾ ಸಿಬ್ಬಂದಿ, ಕೃಷಿ ಸಖಿಯರು, ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರುಗಳು, ಪಶು ಸಖಿಯರು, ಸ್ಥಳೀಯ ಚುನಾಯಿತ ಪ್ರತಿನಿಧಿಗಳು, ಕೃಷಿಕ ಸಮಾಜದ ಪ್ರತಿನಿಧಿಗಳು, ರೈತ ಮುಖಂಡರು, ರೈತ ಉತ್ಪಾದಕ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಅಭಿಯಾನದಲ್ಲಿ ಪಾಲ್ಗೊಂಡಿದ್ದರು. ವಿವಿಧ ತಂತ್ರಜ್ಞಾನಗಳಾದ ಬೀಜೋಪಚಾರ, ಸುಧಾರಿತ ತಳಿಗಳು, ತೋಟಗಾರಿಕೆ ಬೆಳೆಗಳು, ಸಿರಿಧಾನ್ಯ ಹಾಗೂ ಅವುಗಳ ಮಹತ್ವ, ಕೃಷಿ ಯಂತ್ರೋಪಕರಣಗಳು, ಸಮಗ್ರ ಕೃಷಿ ಪದ್ಧತಿಗಳ ತರಬೇತಿ ನೀಡಲಾಯಿತು. ಮುಂಗಾರು ಬೆಳೆಗಳ ಬೇಸಾಯ ಕ್ರಮಗಳು, ಕೀಟ ಹಾಗೂ ರೋಗ ನಿರ್ವಹಣೆ ಬಗ್ಗೆ ಮಾಹಿತಿ ಕೈಪಿಡಿ, ಕೃಷಿ ಹಾಗೂ ತೋಟಗಾರಿಕೆ ಇಲಾಖೆಗಳ ಯೋಜನೆಗಳ ಬಗ್ಗೆ ಹಸ್ತಪ್ರತಿಗಳನ್ನು ವಿತರಿಸಲಾಯಿತು. ಮುಂಡರಗಿ ಹಾಗೂ ರೋಣ ತಾಲೂಕಿನ ಒಟ್ಟು 7 ಗ್ರಾಮಗಳ ರೈತರು ಅಭಿಯಾನದಲ್ಲಿ ಭಾಗವಹಿಸಿದ್ದರು.

# ಮಕ್ಕಳನ್ನು ನಿಯಮಿತವಾಗಿ ಶಾಲೆಗೆ ಕಳಿಸಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶಿಕ್ಷಣಕ್ಕಾಗಿ ಸರಕಾರ ಬಹಳಷ್ಟು ಯೋಜನೆಗಳನ್ನು ಜಾರಿಗೊಳಿಸಿದೆ. ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸುವುದಕ್ಕಾಗಿ ಮತ್ತು ದಾಖಲಾತಿಯನ್ನು ಹೆಚ್ಚಿಸುವುದಕ್ಕಾಗಿ ಅನೇಕ ಯೋಜನೆಗಳಿವೆ.

ಇವುಗಳನ್ನು ಸದುಪಯೋಗ ಪಡಿಸಿಕೊಂಡು ನಿಮ್ಮ ಮಕ್ಕಳು ನಿಯಮಿತವಾಗಿ ಶಾಲೆಗೆ ಬರುವಂತೆ ನೋಡಿಕೊಳ್ಳಿ ಎಂದು ಮುಖ್ಯ ಶಿಕ್ಷಕ ಸಂಗಯ್ಯ ಪ್ರಭುಸ್ವಾಮಿಮಠ ಹೇಳಿದರು.

ಪಟ್ಟಣದ ಕೋಡಿಕೊಪ್ಪದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಶಾಲಾ ಪ್ರಾರಂಭೋತ್ಸವ ಹಾಗೂ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಿಮ್ಮ ಮಕ್ಕಳಿಗೆ ಉಚಿತ ಪಠ್ಯಪುಸ್ತಕ, ಸಮವಸ್ತ್ರ,




ಬಿಸಿಯೂಟ ಹೀಗೆ ಅನೇಕ ಯೋಜನೆಗಳನ್ನು ಸರಕಾರ ಜಾರಿಗೊಳಿಸಿದೆ. ಶಾಲಾ ಅವಧಿಯಲ್ಲಿ ನಮ್ಮ ಶಿಕ್ಷಕ ಬಳಗ ಅವರನ್ನು ಅತ್ಯಂತ ಸಮರ್ಪಕವಾಗಿ ಕಾಳಜಿ ಮಾಡುತ್ತದೆ.

ಮಗು ಮನೆಗೆ ಮರಳಿದ ನಂತರ ಶಾಲೆಯಲ್ಲಿ ಅಂದಿನ ದಿನದ ಪಾಠವನ್ನು ಪಾಲಕರು ಕೇಳಬೇಕು. ಅವರ ಮನೆಗೆಲಸದ ಕಡೆಗೆ ಪಾಲಕರು ಗಮನ ನೀಡಿ ಮಕ್ಕಳು ಅಂದಿನ ಮನೆಗೆಲಸವನ್ನು ಅಂದೇ ಮಾಡುವಂತೆ ಪ್ರೇರಣೆ ನೀಡಬೇಕು. ಇದರಿಂದ ನಿಮ್ಮ ಮಕ್ಕಳು ಓದಿನಲ್ಲಿ ಚುರುಕಾಗುತ್ತಾರೆ, ಭವಿಷ್ಯದಲ್ಲಿ ಜಾಣರಾಗುತ್ತಾರೆ ಎಂದು ಹೇಳಿದರು.

ಶಾಲೆಗೆ ಬಂದ ಮಕ್ಕಳನ್ನು ಗುಲಾಬಿ ಹೂ ನೀಡಿ ಸ್ವಾಗತಿಸಿದರು.

ಶಾಲೆಗೆ ಬಂದ ಮಕ್ಕಳಿಗೆಲ್ಲ ಪಠ್ಯಪುಸ್ತಕಗಳನ್ನು ವಿತರಿಸಲಾಯಿತು. ಈವೇಳೆ ಶಿಕ್ಷಕಿಯರಾದ ಎಲ್.ಎಸ್. ಶಿವಪ್ಪಗೌಡರ, ಎಲ್.ಎಸ್. ಗಂಗಾಪೂರ, ಎನ್.ಎ. ಹುಬಳೀಕರ, ಶಿಕ್ಷಕರಾದ ಬಿ.ಎಸ್. ಕರಮುಡಿ, ಜೆ.ಡಿ. ಶಾಲದಾರ, ಪಾಲಕರು ಉಪಸ್ಥಿತರಿದ್ದರು.

# 'ಪುಟ್ಟಣ್ಣನ ಕತ್ತೆ' ಸಿನಿಮಾ ಪೋಸ್ಟರ್ ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಚಲನಚಿತ್ರ ನಿರ್ದೇಶಕ ಸಿದ್ದು ಪೂರ್ಣಚಂದ್ರ ಜನುಮದಿನದಂದು ಚಿತ್ರತಂಡ 'ಪುಟ್ಟಣ್ಣನ ಕತ್ತೆ' ಚಿತ್ರದ ಪೋಸ್ಟರ್ ಬಿಡುಗಡೆ ಮಾಡಿದೆ. ಮೊದಲ ಪೋಸ್ಟರ್‌ನಲ್ಲಿ ಕತ್ತೆಯನ್ನು ತೋರಿಸಿರುವುದು ಚಿತ್ರದ ಶುಭ ಸೂಚನೆ ಎಂದು ಚಿತ್ರತಂಡ ಹೇಳಿಕೊಂಡಿದೆ. ಮುಂದಿನ ಪೋಸ್ಟರ್‌ನಲ್ಲಿ ಕಲಾವಿದರನ್ನು ತೋರಿಸಲಾಗುತ್ತದೆ ಎಂದು ನಿರ್ದೇಶಕರು ತಿಳಿಸಿದರು.




ಎಲ್ಲರೂ ನಾಯಿಯ ಮೇಲೆ ಚಿತ್ರ ಮಾಡಿದರೆ, ನಾನ್ಯಾಕೆ ಕತ್ತೆ ಮೇಲೆ ಕತೆ ಬರೆದು ಚಿತ್ರ ಮಾಡಬಾರದು ಎಂದು ವಿಚಾರ ಬಂದಾಗ ಈ ಕಥೆ ಹೊಳೆಯಿತು. ಈ ಚಿತ್ರದಲ್ಲಿ ಪೂರ್ಣ ಪ್ರಮಾಣದಲ್ಲಿ ಮನುಷ್ಯರ ಜೊತೆ ಕತ್ತೆಯನ್ನು ಬಳಸಲಾಗಿದೆ. ನಮ್ಮೆಲ್ಲರಿಗೂ ಕತ್ತೆಯ ಜೊತೆಗಿನ ಒಡನಾಟ ಹೊಸದು. ಅದರ ಮನಸ್ಥಿತಿ ನೋಡಿಕೊಂಡು ಮೊದಲ ಹಂತದ ಚಿತ್ರೀಕರಣ ಮಾಡಿದೆವು. ಇನ್ನೊಂದು ಹಂತದ ಚಿತ್ರೀಕರಣಕ್ಕೆ ಸಿದ್ಧತೆ ನಡೆಯುತ್ತಿದೆ. ಪ್ರಾರಂಭದಲ್ಲಿ ಕಷ್ಟವೆಸಿದರೂ ಒಂದೆರಡು ದಿನಗಳಲ್ಲಿ ಕತ್ತೆಯೂ ನಮ್ಮೊಂದಿಗೆ ಸಹಕರಿಸಿದ್ದು ವಿಶೇಷ. ಇದಕ್ಕೆ ಕಥೆ-ಚಿತ್ರಕಥೆ-ಸಂಭಾಷಣೆ ಬರೆದು ನಿರ್ದೇಶನ ಮಾಡುತಿದ್ದೇನೆಂದು ಸಿದ್ದು ಪೂರ್ಣಚಂದ್ರ ಚಿತ್ರದ ಬಗ್ಗೆ ಮಾಹಿತಿ ಹಂಚಿಕೊಂಡರು.

'ಪೂರ್ಣಚಂದ್ರ ಫಿಲಂಸ್' ಲಾಂಛನದ ಈ ಚಿತ್ರದ ಮುಖ್ಯ ಪಾತ್ರದಲ್ಲಿ ಅನಿಶ್ ಆರ್ಯನ್, ಭೀಮೇಶ್ ಅಭಿನಯಿಸಿದ್ದಾರೆ. ಉಳಿದಂತೆ ಕಲಾರತಿ ಮಹದೇವ್, ಸಿದ್ದು ಮಂಡ್ಯ, ರಶ್ಮಿ ಮೈಸೂರ್, ಬಾಬು, ರೋಹಿಣಿ, ಎನ್.ಟಿ. ರಾಮಸ್ವಾಮಿ, ಲಕ್ಕಿ ಶಂಕರ್, ಶೃತಿ ಗಗನ, ಸೌಮ್ಯ, ಕವಿತಾ ಕಂಬಾರ್, ಲಿಯೋ ಶರ್ಮ, ವಿಭಾ ವಂದನ್ ಮುಂತಾದವರು ಅಭಿನಯಿಸುತ್ತಿದ್ದಾರೆ. ಛಾಯಾಗ್ರಾಹಣ ರಾಜು ಹೆಮ್ಮಿಗೆಪುರ, ಸಂಕಲನ ದೀಪು, ಸಂಗೀತ ಅನಂತ್ ಆರ್ಯನ್, ಸಿಂಕ್ ಸೌಂಡ್ ಕೃಷ್ಣಮೂರ್ತಿ, ಪತ್ರಿಕಾ ಸಂಪರ್ಕ ಸುಧೀಂದ್ರ ವೆಂಕಟೇಶ, ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ ಅವರದಿದೆ. ಈ ಚಿತ್ರಕ್ಕೆ ಇದೇ ಮೊದಲ ಬಾರಿಗೆ ತನ್ಮಯ್ ಎಸ್.ಗೌಡ ಬಂಡವಾಳ ಹೂಡಿದ್ದಾರೆ.

# ಭದ್ರಾದ್ರಿ ಕೊಥಗುಡೆಮ್‌ನಲ್ಲಿ 17 ಮಾವೋವಾದಿಗಳು ಪೊಲೀಸರಿಗೆ ಶರಣು

■ವಿಜಯಸಾಕ್ಷಿ ಸುದ್ದಿ, ತೆಲಂಗಾಣ

ತೆಲಂಗಾಣದ ಭದ್ರಾದ್ರಿ ಕೊಥಗುಡೆಮ್‌ನಲ್ಲಿ ಛತ್ತೀಸ್‌ಗಢದ ಹದಿನೇಳು ಮಾವೋವಾದಿಗಳು ಕೇಂದ್ರ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್) ಗೆ ಶುಕ್ರವಾರ (ಮೇ.30) ಶರಣಾಗಿದ್ದಾರೆ.

ಶರಣಾದ 11 ಪುರುಷ ಮತ್ತು ಆರು ಮಹಿಳೆಯರಲ್ಲಿ ಇಬ್ಬರು ಪ್ರದೇಶ ಸಮಿತಿ ಸದಸ್ಯರಾಗಿ (ಎಸಿಎಂ) ಸೇವೆ ಸಲ್ಲಿಸಿದ್ದಾರೆ ಎಂದು ಭದ್ರಾದ್ರಿ ಕೊಥಗುಡೆಮ್ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ರೋಹಿತ್ ರಾಜ್ ಮಾಧ್ಯಮಗಳಿಗೆ ನೀಡಿದ ಮಾಹಿತಿಯ ಸಂದರ್ಭದಲ್ಲಿ ತಿಳಿಸಿದ್ದಾರೆ. "ತೆಲಂಗಾಣ ಸರ್ಕಾರ ಆರಂಭಿಸಿದ ಆಪರೇಷನ್ ಚೆಯುತಾ ಕಾರ್ಯಕ್ರಮದ ಭಾಗವಾಗಿ ಮಾವೋವಾದಿಗಳು ಶರಣಾಗಿದ್ದಾರೆ" ಎಂದು ಎಸ್‌ಪಿ ಹೇಳಿದರು.

ತಕ್ಷಣದ ಸಹಾಯದ ಭಾಗವಾಗಿ ಪೊಲೀಸರು ಅವರಿಗೆ 25,000 ರೂ.ಗಳ ಚೆಕ್‌ಗಳನ್ನು ನೀಡಿದ್ದಾರೆ. ಜನವರಿ 2025 ರಿಂದ ಇಲ್ಲಿಯವರೆಗೆ 282 ಮಾವೋವಾದಿಗಳು ಭದ್ರತಾ ಪಡೆಗಳಿಗೆ ಶರಣಾಗಿದ್ದಾರೆ.

ಮೇ 9 ರಂದು, ನಿಷೇಧಿತ ಸಿಪಿಐ (ಮಾವೋವಾದಿ) ಪಕ್ಷಕ್ಕೆ ಸಂಬಂಧಿಸಿದ ಮೂವತ್ತೆಂಟು ಸದಸ್ಯರು ಭದ್ರಾದ್ರಿ-ಕೊಥಗುಡೆಮ್ ಪೊಲೀಸರ ಮುಂದೆ ತಮ್ಮ ಶಸ್ತ್ರಾಸ್ತ್ರಗಳನ್ನು ಹಾಕಿದ್ದಾರೆ.

ಆ ಗುಂಪಿನಲ್ಲಿ ಇಬ್ಬರು ಪಕ್ಷದ ಸದಸ್ಯರು, 16 ಮಿಲಿಟಿಯಾ ಸದಸ್ಯರು, ಏಳು ಗ್ರಾಮ ಸಮಿತಿ ಸದಸ್ಯರು (ವಿಸಿಎಂಗಳು), 6 ಕ್ರಾಂತಿಕಾರಿ ಆದಿವಾಸಿ ಮಹಿಳಾ ಸಂಘಟನೆ (ಕೆಎಂಎಸ್) ಸದಸ್ಯರು, 3 ಚೇತನ ನಾಟ್ಯ ಮಂಚ್ (ಸಿಎನ್‌ಎಂ) ಸದಸ್ಯರು ಮತ್ತು 4 ಗೆರಿಲ್ಲಾ ಕ್ರಾಂತಿಕಾರಿ ಜಿಲ್ಲೆಗಳ (ಜಿಆರ್‌ಡಿಎಸ್) ಸದಸ್ಯರು ಇದ್ದರು.

ಅವರು ನಕ್ಸಲಿಸಂ ಅನ್ನು ತ್ಯಜಿಸಿ ತಮ್ಮ ಕುಟುಂಬಗಳೊಂದಿಗೆ ಶಾಂತಿಯುತ ಜೀವನವನ್ನು ಸ್ವೀಕರಿಸುವ ನಿರ್ಧಾರವನ್ನು ವ್ಯಕ್ತಪಡಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka